ಸಂಪುಟ 01 । ಸಂಚಿಕೆ 162 । ಬುಧವಾರ 06 ಮೇ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE
ಸತ್ಯದ ದಿಕ್ಕು TRUE PATH
ಕನ್ನಡ ದಿನ ಪತ್ರಿಕೆ
ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ
REGIONAL KANNADA DAILY MORNING
RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಅಂತರರಾಷ್ಟ್ರೀಯ ಆಹಾರ ರಹಿತ ದಿನ
ಪ್ರತಿ ವರ್ಷ ಮೇ 6 ರಂದು ಇದನ್ನು ಆಚರಿಸಲಾಗುತ್ತದೆ. ಇದು ದೇಹದ ಆಕಾರ ವೈವಿಧ್ಯತೆ ಸೇರಿದಂತೆ ದೇಹದ ಸ್ವೀಕಾರದ ಆಚರಣೆಯಾಗಿದೆ.

## ಸುಭಾಷಿತ

ಒಳ್ಳೆಯದನ್ನು ತಿಳಿಯುವ ಹಟ ಬಂದರೆ ಜನರ ಬಾಳಿಗೆ ಅದೊಂದೇ ಬೆಳಕು.

–ಸಾಕ್ರಟಿಸ್

## ಅಂಗ, ಬಂಗ, ಕಳಿಂಗದಲ್ಲಿ ಬಿಜೆಪಿ ಜಯಭೇರಿ

# ನಿಜವಾದ ಅಮಿತ್ ಶಾ ಭವಿಷ್ಯ

**ನವದೆಹಲಿ: ಅತ್ಯಂತ ಕ್ಲಿಷ್ಟಕರ ಎನಿಸಿದ್ದ ಪ.ಬಂಗಾಳದಲ್ಲಿ ಮೊದಲ ಬಾರಿಗೆ ಭಾರೀ ಬಹುಮತ ಪಡೆದು ಬಿಜೆಪಿ ಅಧಿಕಾರ ಗದ್ದುಗೆ ಹಿಡಿದಿರುವುದು ಚುನಾವಣಾ ಚಾಣಕ್ಯ ಅಮಿತ್ ಶಾ ಭವಿಷ್ಯ ವಾಣಿ ನುಡಿದಿದ್ದಕ್ಕೂ ಸಾಮ್ಯತೆ ಇದೆ. ಶತಾಯಗತಾಯ ಪ.ಬಂಗಾಳವನ್ನು ಗೆಲ್ಲಲೇಬೇಕೆಂದು ವಿಶೇಷ ರಣತಂತ್ರ ರೂಪಿಸಿದ್ದ ಅಮಿತ್ ಶಾ ಅವರು ಕಳೆದ ಆರು ತಿಂಗಳಿನಿಂದ ಸದ್ದಿಲ್ಲದ ದೀದಿ ಸಾಮ್ರಾಜ್ಯವನ್ನು ಕೆಡವಲು ತಮದೇ ಆದ ವಿಶೇಷವಾದ ರಣತಂತ್ರ ರೂಪಿಸಿದ್ದರು.**

ಅಮಿತ್ ಶಾ ಅವರು ಪ.ಬಂಗಾಳವನ್ನು ಬಿಜೆಪಿ ಗೆಲ್ಲಲಿದೆ ಎಂದು ಎಷ್ಟು ಕರಾರುವಕ್ಕಾಗಿ ನುಡಿದಿದ್ದರು ಎಂದರೆ ಕಳೆದ ಏ.24 ರಂದು ಕೋಲ್ಕತ್ತಾದಲ್ಲಿ ನಡದ ಪತ್ರಿಕಾಗೋಷ್ಠಿಯಲ್ಲಿ ಅಂಗ, ಬಂಗ ಮತ್ತು ಕಳಿಂಗ ರಾಜ್ಯದಲ್ಲಿ ನಾವು ಅಧಿಕಾರ ಹಿಡಿದೇ ತೀರುತ್ತೇವೆ ಎಂದು ಅಚಲ ವಿಶ್ವಾಸದಲ್ಲಿ ನುಡಿದಿದ್ದರು. ಅವರು ಹೇಳಿದ್ದ ಒಂದೊಂದು ಮಾತುಗಳು ಕೂಡ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದ್ದು, ಅಮಿತ್ ಶಾ ನಡೆಗೆ ವ್ಯಾಪಕವಾದ ಪ್ರಶಂಸೆ ವ್ಯಕ್ತವಾಗಿದೆ.ಈ ಹಿಂದೆ ಬಿಹಾರದಲ್ಲೂ ಎನ್‌ಡಿಎ ಮೈತ್ರಿಕೂಟ ಸರ್ಕಾರ ರಚನೆ ಮಾಡಲಿದೆ ಎಂದು ಹೇಳಿದ್ದರು. ಅವರು



ನುಡಿದಂತೆಯೇ ರಾಜ್ಯದಲ್ಲಿ ಮೈತ್ರಿಕೂಟ ಭಾರೀ ಬಹುಮತ ಪಡೆದು ಅಧಿಕಾರಕ್ಕೆ ಬಂದಿತ್ತು.

ಕಳೆದ ಮೇ 4ರಂದು ಅಮಿತ್ ಶಾ ಅವರು ಪತ್ರಿಕಾಗೋಷ್ಠಿಯಲ್ಲಿ ಮುಂಜಾನೆ ಮತ ಎಣಿಕೆ ಆರಂಭವಾಗಲಿದೆ. 9 ಗಂಟೆಯ ವೇಳೆಗೆ ಮೊದಲ ಸುತ್ತು, 10 ಗಂಟೆಗೆ ಎರಡನೇ ಸುತ್ತು ಮುಗಿಯುತ್ತದೆ. ಮಧ್ಯಾಹ್ನ 1 ಗಂಟೆಗೆ ಬಹುತೇಕ ಎಣಿಕೆ ಕಾರ್ಯ ಮುಗಿದಿರುತ್ತದೆ. ಅದು ದೀದಿಗೆ ಟಾಟಾ ಬೈ ಬೈ ಆಗಿರುತ್ತದೆ- ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ಚುನಾವಣೆಗೆ ಮುನ್ನ ಏ.22ರಂದು ವಿವಿಧ ರಾಜಕೀಯ ರ್ಯಾಲಿಗಳಲ್ಲಿ ಕೇಂದ್ರ ಗೃಹಸಚಿವ ಅಮಿತ್ ಶಾ ಮೇಲಿನಂತೆ ಭವಿಷ್ಯ ನುಡಿದಿದ್ದರು. ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿಯವರ 15 ವರ್ಷಗಳ ಆಳ್ವಿಕೆ ಕೊನೆಗೊಳಿಸಿ ಟಿಎಂಸಿ ಭದ್ರಕೋಟೆಯನ್ನು ಭೇದಿಸಿ ಅಧಿಕಾರದ ಚುಕ್ಕಾಣಿ ಹಿಡಿದಿರುವ ಬಿಜೆಪಿ ಮುಖಂಡರ ಈ ಭವಿಷ್ಯವಾಣಿ ಕುರಿತ ವಿಡಿಯೋಗಳು ಫಲಿತಾಂಶ ಪ್ರಕಟಣೆಯ ಬೆನ್ನಲ್ಲೇ ಜಾಲತಾಣಗಳಲ್ಲಿ ವ್ಯಾಪಕವಾಗಿ ವೈರಲ್ ಆಗಿವೆ.

ಅಂತೆಯೇ ಈ ಚುನಾವಣೆ ಮುಗಿದ ಬಳಿಕ ಬಿಜೆಪಿ ಆಡಳಿತ ಅಂಗ, ಬಂಗ ಮತ್ತು ಕಳಿಂಗ (ಬಿಹಾರ, ಬಂಗಾಳ, ಒಡಿಶಾ) ಪ್ರದೇಶಗಳಿಗೆ ವ್ಯಾಪಿಸಿರುತ್ತದೆ ಎಂದು ಶಾ ಹೇಳಿದ್ದು ಇದೀಗ ನಿಜವಾಗಿದೆ. ಅಮಿತ್ ಶಾ ಹೇಳಿಕೆಯ ಬೆನ್ನಲ್ಲೇ ಕಾರ್ಯಕರ್ತರು ಬೆಂಬಲಿಗರು ಈ ಬಾರಿ ಬಿಜೆಪಿ ಗೆಲುವಿನ ವಿಶ್ವಾಸ ಹೊಂದಿದ್ದರು. ಇದಕ್ಕೂ ಮುನ್ನ ಕಾಂಗ್ರೆಸ್ ಪಕ್ಷ 1970ರ ದಶಕದಲ್ಲಿ ಈ ಮೂರು ಪೂರ್ವರಾಜ್ಯಗಳಲ್ಲಿ ಅಧಿಕಾರ ಹೊಂದಿತ್ತು. ತುರ್ತು ಪರಿಸ್ಥಿತಿ ಬಳಿಕ ನಡೆದ ಬಂಗಾಳ ಚುನಾವಣೆಯಲ್ಲಿ ಎಡಪಕ್ಷಗಳ ವಿರುದ್ಧ ಸೋಲು ಅನುಭವಿಸಿತ್ತು. ಕಾಂಗ್ರೆಸ್ ಕ್ರಮೇಣ ಮೂರೂ ರಾಜ್ಯಗಳಲ್ಲಿ ಕಾಂಗ್ರೆಸ್ ಯುಗ ಅಂತ್ಯವಾಯಿತು. ಬಿಜೆಪಿ ಮುಖ್ಯಸ್ಥರಾದ ಮೊದಲ ದಿನದಿಂದಲೇ ಟಿಎಂಸಿ ವಿರುದ್ಧ ತಳಹಂತದ ಅಭಿಯಾನ ಕೈಗೊಂಡಿದ್ದರು.

ಈ ಪ್ರಯತ್ನ ಪಕ್ಷವನ್ನು ಅಧಿಕಾರಕ್ಕೆ ತರುವವರೆಗೂ ನಿಲ್ಲಲಿಲ್ಲ. 2021ರ ಚುನಾವಣೆಯಲ್ಲಿ ನಿರಾಸೆ, ಕಳೆದ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಸಂಸದರ ಸಂಖ್ಯೆ 18 ರಿಂದ 12ಕ್ಕೆ ಇಳಿದರೂ ಎದೆಗುಂದದೇ ಪಕ್ಷ ಸಂಘಟನೆಯನ್ನು ನಿರಂತರವಾಗಿ ಮಾಡಿಕೊಂಡು ಬಂದ ಶಾ ಈ ಬಾರಿ ಅದರ ಫಲ ಸಿಗುವ ವಿಶ್ವಾಸದಲ್ಲಿದ್ದು, ರ್ಯಾಲಿಗಳಲ್ಲಿ ಆತವಿಶ್ವಾಸದಿಂದ ಬೈ ದೀದಿ ಪ್ರತಿಪಾದನೆ ಮಾಡುತ್ತಾ ಬಂದಿದ್ದರು.

## ಕುಡಿಯುವ ನೀರಿನ ಕೊರತೆ ಇರುವ ಗ್ರಾಮಗಳಿಗೆ ಕಡ್ಡಾಯವಾಗಿ ಭೇಟಿ ನೀಡಿ: ಜಿಲ್ಲಾಧಿಕಾರಿ ನಿತೀಶ್ ಕೆ.

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಬೇಸಿಗೆ ದಿನಗಳಲ್ಲಿ ಕುಡಿಯುವ ನೀರಿನ ಕೊರತೆಯಾಗದಂತೆ ಪರಿಸ್ಥಿತಿಯನ್ನು ಅವಲೋಕಿಸಲು ಜಿಲ್ಲೆಯ ಪ್ರತಿ ತಾಲೂಕಿಗೆ ಒಬ್ಬ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದ್ದು, ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿರುವ ಗ್ರಾಮಗಳ ಹಾಗೂ ಮುಂಬರುವ ದಿನಗಳಲ್ಲಿ ಸಮಸ್ಯೆ ಎದುರಿಸಬಹುದಾದ ಗ್ರಾಮಗಳ ವಿವರಗಳನ್ನು ಸಂಬಂಧಪಟ್ಟ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು,**



ಸದರಿ ತಮ್ಮ ತಮ್ಮ ತಾಲೂಕುಗಳ ಎಲ್ಲಾ ಸಮಸ್ಯಾತ್ಮಕ ಗ್ರಾಮಗಳಿಗೆ ಕಡ್ಡಾಯವಾಗಿ ಭೇಟಿ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ.ಅವರು ಸೂಚಿಸಿದ್ದಾರೆ. ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಿ, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು. ಹಾಗೂ ನೋಡಲ್ ಅಧಿಕಾರಿಗಳು ಭೇಟಿ ನೀಡಿದ ಸಮಯದಲ್ಲಿ ಜಿ.ಪಿ.ಎಸ್ ಭಾವಚಿತ್ರದೊಂದಿಗೆ ತೆಗೆದುಕೊಂಡ ಫೋಟೋಗಳೊಂದಿಗೆ ತಾವು ತೆಗೆದುಕೊಂಡ ಕ್ರಮಗಳ ಕುರಿತು ವರದಿಯನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಮ್ ಎನ್ ದೇಸಾಯಿ ಕಾಲೇಜಿನಲ್ಲಿ ಕನ್ನಡ ಕೋಟ್ಯಾಧಿಪತಿ ಕಾರ್ಯಕ್ರಮ




ನೈಜ್ಯ ದೆಸೆ ನ್ಯೂಸ್

**ಕಲಬುರಗಿ:** ವಿದ್ಯಾರ್ಥಿಗಳ ಜ್ಞಾನಾಭಿವೃದ್ಧಿ, ಚಿಂತನಾ ಶಕ್ತಿ ವೃದ್ಧಿ ಹಾಗೂ ಮನರಂಜನೆಗೆ ಉತ್ತೇಜನ ನೀಡುವ ಉದ್ದೇಶದಿಂದ ನಗರದ ಎಂ.ಎನ್. ದೇಸಾಯಿ ಪದವಿ ಮಹಾವಿದ್ಯಾಲಯದಲ್ಲಿ "ಕನ್ನಡದ ಕೋಟ್ಯಾಧಿಪತಿ" ವಿಶೇಷ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಪುನೀತ್ ರಾಜಕುಮಾರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಯಿತು. ಪ್ರಶ್ನೋತ್ತರ ಸ್ಪರ್ಧೆಯ ಮಾದರಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆ, ಜ್ಞಾನ ಹಾಗೂ ಚಾತುರ್ಯವನ್ನು ಪ್ರದರ್ಶಿಸಿದರು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಆಕರ್ಷಕ ಬಹುಮಾನಗಳನ್ನು ವಿತರಿಸಿ ಪ್ರೋತ್ಸಾಹಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಕಾರ್ಯದರ್ಶಿ ಜಗನ್ನಾಥ ನಾಗೂರ, ಅಧ್ಯಕ್ಷ ಸಂದೀಪ್ ದೇಸಾಯಿ ಸೇರಿದಂತೆ ಮಂಜುನಾಥ್ ಬನ್ನೂರ್, ಅಮರ್ ಹಾಗರಗಿ, ನಾಗರಾಜ್ ಪಟ್ಟಣಕರ, ಶಿವಶರಣಪ್ಪ ಪೂಜಾರಿ, ರೇವಣಸಿದ್ದಪ್ಪ ಹೂಗಾರ್, ಶ್ರೀದೇವಿ ಹಿರೇಮಠ, ಗುರುವಾಯಿ ವಾಡಿ, ಅಂಬಿಕಾ ಪಟ್ಟೆ, ರಾಧಿಕಾ ಗುತ್ತೇದಾರ್, ರೇಷ್ಮಾ ರಾಥೋಡ್, ಚೆನ್ನಮ್ಮ, ಜ್ಯೋತಿ ಹಂಗರಗಿ, ಶಿಲ್ಪಾ ಶೆಟ್ಟಿ, ಗೀತಾ ಇಂಗಿನ, ಸಂತೋಷ್ ಲಸ್ಕರ್, ಕಾಶಿಬಾಯಿ ವಗ್ಗೆ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗ ಮತ್ತು ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿಗಳಲ್ಲಿ ಸಾಮಾನ್ಯ ಜ್ಞಾನ, ಆತ್ಮವಿಶ್ವಾಸ ಮತ್ತು ಸ್ಪರ್ಧಾತ್ಮಕ ಮನೋಭಾವ ಬೆಳೆಸುವಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ್ದಾಗಿವೆ ಎಂದು ಕಾಲೇಜಿನ ಆಡಳಿತ ಮಂಡಳಿ ತಿಳಿಸಿದೆ.

## ಮುದಗಲ್: ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ಲಿಂಗಸುಗೂರು ತಾಲೂಕಿನ ಮುದಗಲ್ ಸರ್ಕಾರಿ ಐಟಿಟಿ ಕಾಲೇಜಿನಲ್ಲಿ 2026ನೇ ಸಾಲಿನಲ್ಲಿ ಪ್ರಥಮ ವರ್ಷದ ವಿವಿಧ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

ಕಾಲೇಜಿನಲ್ಲಿ ವಿವಿಧ ವೃತ್ತಿಗಳಾದ ವಿದ್ಯುತ್ ಕರ್ಮಿ (Electrician) ಮತ್ತು ಜೋಡಣೆಗಾರ (Fitter) 2 ವರ್ಷಗಳ ಕೋರ್ಸುಗಳಿದ್ದು, ಸಂಸ್ಥೆಯು ಅತ್ಯಾಧುನಿಕ ಯಂತ್ರೋಪರಣಗಳು, ಸುಸಜ್ಜಿತವಾದ ಕಂಪ್ಯೂಟರ್ ಲ್ಯಾಬ್ ಹೊಂದಿದ್ದು, ಆಸಕ್ತರು ವೆಬ್‌ಸೈಟ್ ವಿಳಾಸ: www. cite.karnataka.gov.in ನಲ್ಲಿ ಆನ್‌ಲೈನ್ ಅಥವಾ ನೇರವಾಗಿ ಸಂಸ್ಥೆಗೆ



ಭೇಟಿ ನೀಡಿ, 2026ರ ಮೇ.08ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.


ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ತರಬೇತಿ ಅಧಿಕಾರಿಗಳಾದ ಮಹಾದೇವ ಕೆ. ಸರ್ಜಾಪುರ ಮೊಬೈಲ್ ಸಂಖ್ಯೆ: 7892955100 ಅಥವಾ ಪ್ರಥಮ ದರ್ಜೆ ಸಹಾಯಕರ ಮೊಬೈಲ್ ಸಂಖ್ಯೆ: 9742063355ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮುದಗಲ್ ಸರ್ಕಾರಿ ಐಟಿಟಿ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹತ್ತಿಕುಣಿ ಕ್ರಾಸ್ ರಸ್ತೆ ವೀಕ್ಷಿಸಿದ ಶಾಸಕ ತುನ್ನೂರ; ಶೀಘ್ರವೇ 5 ಕೋಟಿ ರೂ. ಕಾಮಗಾರಿ ಆರಂಭ

ನೈಜ್ಯ ದೆಸೆ ನ್ಯೂಸ್

**ಯಾದಗಿರಿ: ನಗರದ ಯಾದಗಿರಿಸೇಡಂ ರಾಜ್ಯ ಹೆದ್ದಾರಿಗೆ ಸಂಪರ್ಕ ಹೊಂದಿರುವ ಹತ್ತಿಕುಣಿ ಕ್ರಾಸ್‌ಗೆ ಭೇಟಿ ನೀಡಿದ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಅವರು ಸ್ಥಳದ ವಾಸ್ತವಿಕ ಸ್ಥಿತಿಯನ್ನು ಪರಿಶೀಲಿಸಿ, ಶೀಘ್ರದಲ್ಲೇ 5 ಕೋಟಿ ರೂ. ವೆಚ್ಚದಲ್ಲಿ ಸಮಗ್ರ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗುವುದಾಗಿ ತಿಳಿಸಿದ್ದಾರೆ.**

ಹತ್ತಿಕುಣಿ ಕ್ರಾಸ್‌ನಿಂದ ಗಂಗಾನಗರದವರೆಗೆ ರಸ್ತೆ ಅಗಲೀಕರಣ, ನೂತನ ರಸ್ತೆ ನಿರ್ಮಾಣ, ಚರಂಡಿ ವ್ಯವಸ್ಥೆ, ರಸ್ತೆ ವಿಭಜಕ ಹಾಗೂ ಎರಡೂ ಬದಿಗಳಲ್ಲಿ ಸ್ಟ್ರೀಟ್ ಲೈಟ್ ಅಳವಡಿಕೆ ಸೇರಿದಂತೆ ಬಸ್ ನಿಲ್ದಾಣ ನಿರ್ಮಾಣ ಕಾರ್ಯ ಕೈಗೊಳ್ಳಲಾಗುವುದು



ಎಂದು ಅವರು ಮಾಹಿತಿ ನೀಡಿದರು.


ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಹಾಗೂ ನಗರಸಭೆ ಅಧಿಕಾರಿಗಳೊಂದಿಗೆ ಚರ್ಚಿಸಿದ ಶಾಸಕ ತುನ್ನೂರ, ರಸ್ತೆ ವ್ಯಾಪ್ತಿಯಲ್ಲಿ ಬರುವ ಅಂಗಡಿ-ಮುಗ್ಗಟ್ಟುಗಳನ್ನು ಸರ್ಕಾರದ ನಿಯಮಾನುಸಾರ ಯಾವುದೇ ಮುಲಾಜಿ ಇಲ್ಲದೇ ತೆರವುಗೊಳಿಸಿ, ರಸ್ತೆ ನಿರ್ಮಾಣಕ್ಕೆ ಅಡಚ.

# ಟಿಎಪಿಸಿಎಂಸಿ ಅಧ್ಯಕ್ಷರಾಗಿ ಜೆ. ಯೋಗೇಶ್ ಅವಿರೋಧ ಆಯ್ಕೆ

ನೈಜ್ಯ ದೆಸೆ ನ್ಯೂಸ್

**ಯಳಂದೂರು: ತಾಲೂಕು ವ್ಯವಸಾಯೋತ್ಪನ್ನ ಮಾರಾಟಗಾರರ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಜೆ. ಯೋಗೇಶ್ ಉಪಾಧ್ಯಕ್ಷರಾಗಿ ಕೊಮಾರನಪುರ ಪುಟ್ಟರಾಜು ಸೋಮವಾರ ಅವಿರೋಧವಾಗಿ ಆಯ್ಕೆಯಾದರು.**

ಈ ಸಂಬಂಧ ಪಟ್ಟಣದಲ್ಲಿರುವ ಸಂಘದ ಕಚೇರಿಯಲ್ಲಿ ಚುನಾವಣಾಧಿಕಾರಿ ನೇತೃತ್ವದಲ್ಲಿ ಚುನಾವಣೆ ನಡೆಸಲಾಯಿತು. ಇವರೆಡೂ ಸ್ಥಾನಕ್ಕೂ ಕೂಡ ಒಬ್ಬೊಬ್ಬರೇ ನಾಮಪತ್ರವನ್ನು ಸಲ್ಲಿಸಿದ್ದ ಹಿನ್ನೆಲೆಯಲ್ಲಿ ಇವರ ಆಯ್ಕೆಯನ್ನು ಅಧಿಕೃತವಾಗಿ ಘೋಷಣೆ ಮಾಡಲಾಯಿತು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಜೆ.ಯೋಗೇಶ್ ಮಾತನಾಡಿ, ಕಳೆದ ಅವಧಿಯಲ್ಲಿ ಹಲವು



ಕಾರಣಗಳಿಂದ ಈ ಸಂಘದಲ್ಲಿ ಹಲವಾರು ದೋಷಗಳು ಕಂಡು ಬಂದಿತ್ತು. ಹಾಗಾಗಿ ಇದನ್ನು ಸೂಪರ್ ಸೀಡ್ ಮಾಡಲಾಗಿತ್ತು. ಈ ಸಂಘಕ್ಕೆ ಹತ್ತಾರು ದಶಕಗಳ ಐತಿಹ್ಯವಿದ್ದು ಇದೊಂದು ತಾಲೂಕಿನ ಲಾಭದಾಯಕ ಸಂಘವಾಗಿತ್ತು. ಆ ವೈಭವವನ್ನು ಮರುಕಳಿಸುವ ನಿಟ್ಟಿನಲ್ಲಿ ನಾನು ಪ್ರಾಮಾಣಿಕವಾಗಿ ದುಡಿಯುತ್ತೇನೆ.

ನಿರ್ದೇಶಕರ ಆಯ್ಕೆಯ ಸಂದರ್ಭದಲ್ಲೂ ಕೂಡ ಎಲ್ಲಾ 12 ಜನ ನಿರ್ದೇಶಕರನ್ನೂ ಸಹ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ಎಲ್ಲರ ಬೆಂಬಲದೊಂದಿಗೆ ನಾನು ಇಂದು ಅಧ್ಯಕ್ಷನಾಗಿ ಆಯ್ಕೆಯಾಗಿದ್ದೇನೆ. ಎಲ್ಲರ ಅಭಿಪ್ರಾಯಕ್ಕೂ ನಾನು ಮನ್ನಣೆಯನ್ನು ನೀಡಿ ಸಂಘದ ಶ್ರೇಯೋಭಿವೃದ್ಧಿಗೆ ಪ್ರಾಮಾಣಿಕವಾಗಿ ದುಡಿಯುತ್ತೇನೆ. ಇದರ ಗತ ವೈಭವನ್ನು ಮರುಕಳಿಸುವ ನಿಟ್ಟಿನಲ್ಲಿ ಸ್ಥಳೀಯ ಸಂಸದರು, ಶಾಸಕರು, ಎಂಸಿಡಿಸಿಸಿ ಬ್ಯಾಂಕ್‌ನ ಉಪಾಧ್ಯಕ್ಷರೂ ಸಹ ನಮ್ಮ ತಾಲೂಕಿನರೇ ಆಗಿದ್ದಾರೆ ಹಾಗಾಗಿ ಸಹಕಾರ ಕ್ಷೇತ್ರದ ಎಲ್ಲರ ನೆರವಿನೊಂದಿಗೆ ಈ ಸಂಘವನ್ನು ಲಾಭದತ್ತ ಕೊಂಡೊಯ್ಯಲು ನಾನು ಶಕ್ತಿ ಮೀರಿ ಎಲ್ಲಾ ನಿರ್ದೇಶಕರ ಸಹಯೋಗದೊಂದಿಗೆ ಕೆಲಸವನ್ನು ಮಾಡುತ್ತೇನೆ ಎಂದು ನುಡಿದರು.

ಉಪಾಧ್ಯಕ್ಷ ಕೊಮಾರನಪುರ ಪುಟ್ಟರಾಜು ಮಾತನಾಡಿ, ಯಳಂದೂರಿನ ಟಿಎಪಿಸಿಎಂಎಸ್ ಗೆ ಹತ್ತಾರು ವರ್ಷಗಳ ಇತಿಹಾಸವಿದೆ. ಇದು ಹಿಂದೆ ಜಿಲ್ಲೆಯಲ್ಲೇ ಲಾಭದಲ್ಲಿ ಮೊದಲನೇ ಸ್ಥಾನದಲ್ಲಿದ್ದ ಸಹಕಾರ ಸಂಘವಾಗಿತ್ತು. ಕಾರಣಾಂತರಗಳಿಂದ ಇದು ಇಂದು ನಷ್ಟದಲ್ಲಿದೆ. ಇಂತಹ ಸಂದರ್ಭದಲ್ಲಿ ನಾವು ಇಲ್ಲಿಗೆ ನಿರ್ದೇಶಕರಾಗಿ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದೇನೆ. ಈ ಸಂದರ್ಭದಲ್ಲಿ ತುಂಬಾ ಜಾಗರೂಕತೆಯಿಂದ ಎಲ್ಲ ಸದಸ್ಯರ ಸಹಯೋಗದೊಂದಿಗೆ ಇದನ್ನು ಮತ್ತೆ ತನ್ನ ಗತವೈಭವಕ್ಕೆ ಮರಳಿಸು ಪ್ರಯತ್ನವನ್ನು ಮಾಡುತ್ತೇನೆ ಎಂದರು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಉಪಾಧ್ಯಕ್ಷರಿಗೆ ತಹಸೀಲ್ದಾರ್ ಎಸ್.ಎಲ್. ನಯನ ಪ್ರಮಾಣಪತ್ರವನ್ನು ವಿತರಿಸಿದರು. ನಿರ್ದೇಶಕರಾದ ಮಹೇಶ್, ಗೌಡಹಳ್ಳಿ ಎಸ್.ರವಿ, ಎಂ.ಸಿ. ಶ್ರೀಕಂಠಮೂರ್ತಿ, ಆರ್. ರಾಜೇಶ್, ಸಿದ್ಧಶೆಟ್ಟಿ, ಪರಶಿವಮೂರ್ತಿ, ವೈ.ಎನ್. ಚೇತನ್‌ಕುಮಾರ್, ಪುಟ್ಟಚಾಮಮ್ಮ, ಮಹದೇವಮ್ಮ, ಸಿ. ನಂಜುಂಡ ಸ್ವಾಮಿ ಕಾರ್ಯದರ್ಶಿ ರಮೇಶ್ ಸೇರಿದಂತೆ ಅನೇಕರು ಇದ್ದರು. **ವರದಿ: ಅನಿಲ್ ಕುಮಾರ್ ಗೂಳಿಪುರ**

## ಸಾಹಿತ್ಯ ಸಿಂಚನ

ಕನಕ ದಾಸ

ಕುಲ ಕುಲವೆಂದು ಹೊಡೆದಾಡದಿರಿ
ಕುಲದ ನೆಲೆಯನೇನಾದರು ಬಲ್ಲಿರಾ
ಎಂದು ಪ್ರಶ್ನಿಸಿದ ದಾಸ ಶ್ರೇಷ್ಠ
ಅವನೇ ನಮ್ಮ ಕನಕ ದಾಸ

ಕಾಗಿನೆಲೆಯ ಆದಿಕೇಶವನ ಭಕ್ತ
ಬಾಡ ಗ್ರಾಮದ ಹೆಮ್ಮೆಯ ಪುತ್ರ
ದಂಡನಾಯಕನಾಗಿದ್ದವನು
ಹರಿದಾಸನಾಗಿ ಮೆರೆದವನು

ಉಡುಪಿಯ ಕೃಷ್ಣನಿಗೆ ಕಿಟಕಿ ಕೊರೆಸಿದ
ಭಕ್ತಿಯ ಬಲ ಏನೆಂದು ತೋರಿಸಿದ
ಜಾತಿ ಮತದ ಗೋಡೆ ಒಡೆದು
ಎಲ್ಲರನ್ನೂ ಒಂದಾಗಿ ಕರೆದ

"ನೀ ಮಾಯೆಯೊಳಗೊ ನಿನ್ನೊಳು ಮಾಯೆಯೊ"
ಎಂದು ವೇದಾಂತ ಸಾರಿದ
"ತೊರೆದು ಜೀವಿಸಬಹುದೆ ಲೋಕವ"
ಎಂದು ಜೀವನ ಪಾಠ ಹೇಳಿದ

ಕೀರ್ತನೆ, ಮುಂಡಿಗೆ, ಮೋಹನತರಂಗಿಣಿ
ಕನ್ನಡಕ್ಕೆ ಕೊಟ್ಟ ಅಮರ ಕೊಡುಗೆ
ಇಂದಿಗೂ ಮನೆ ಮನೆಯಲ್ಲಿ
ಕನಕನ ಹಾಡು ಕೇಳುತ್ತೆ

ಭಕ್ತಿ ಅಂದ್ರೆ ಕನಕ ದಾಸ
ಸಮಾನತೆ ಅಂದ್ರೆ ಕನಕ ದಾಸ
ಕನ್ನಡದ ಕಣ್ಮಣಿ ಅವನು
ನಮ್ಮ ಹೆಮ್ಮೆಯ ದಾಸ ಶ್ರೇಷ್ಠ

ಎಸ್. ದುರಗಪ್ಪ.ಕುಷ್ಟಗಿ

## ಮಸ್ಕಿಯಲ್ಲಿ ಮಾಜಿ ಶಾಸಕ ಪ್ರತಾಪ್ ಗೌಡ ಪಾಟೀಲರಿಂದ ಸುದ್ದಿಗೋಷ್ಠಿ

### ಮೇ.9 ರಂದು ದಾವಣಗೆರೆಯಲ್ಲಿ ಯಡಿಯೂರಪ್ಪ ಅಭಿಮಾನೋತ್ಸವ: ಪ್ರತಾಪಗೌಡ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ರಾಜಕೀಯ ಕ್ಷೇತ್ರದಲ್ಲಿ 50 ವರ್ಷಗಳು ಪೂರೈಸುವ ಹಿನ್ನಲೆಯಲ್ಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅಭಿಮಾನಿಗಳೆಲ್ಲಾ ಸೇರಿಕೊಂಡು ಮೇ 9 ರಂದು ದಾವಣಗೆರೆಯಲ್ಲಿ ಯಡಿಯೂರಪ್ಪ ಅಭಿಮಾನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಕ್ಷೇತ್ರದಿಂದ ಸುಮಾರು 2 ಸಾವಿರ ಕಾರ್ಯಕರ್ತರು ತೆರಳಲಿದ್ದಾರೆಂದು ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ ರಾಜಕೀಯದಲ್ಲಿ 50 ವರ್ಷಗಳು ಪೂರೈಸಿದ ಹಿನ್ನಲೆಯಲ್ಲಿ ಅಭಿಮಾನೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ರಾಜ್ಯದ ಮೂಲೆ-ಮೂಲೆಗಳಿಂದ ಸುಮಾರು 10 ಸಾವಿರಕ್ಕೂ ಅಧಿಕ ಜನಸಂಖ್ಯೆ ಸೇರುವ ನೀರಿಕ್ಷೆಯಿದ್ದು, ಕ್ಷೇತ್ರದಿಂದ



ಸುಮಾರು 2 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಲಿದ್ದಾರೆಂದು ಹೇಳಿದರು.

ಆಡಳಿತ ಸರ್ಕಾರದ ಅಲೆ ಮತ್ತು ಅನುಕಂಪ ಇರುವುದರಿಂದ 2 ಕಡೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದಿದೆ. ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ದುರಾಡಳಿತದಿಂದ ಬೇಸತ್ತು ಅಲ್ಲಿನ ಜನರು ಬಿಜೆಪಿಗೆ ಬೆಂಬಲಿಸಿದ್ದರಿಂದ ಸ್ಪಷ್ಟ ಬಹುಮತದಿಂದ ಅಧಿಕಾರಕ್ಕೆ ಬಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಶರಣಬಸವ ಸೊಪ್ಪಿಮಠ, ಪುರಸಭೆ ಅಧ್ಯಕ್ಷ ಸುರೇಶ ಹರಸೂರು, ಬಸವಂತರಾಯ ಕುರಿ, ಚಂದ್ರಕಾಂತ ಗೂಗೆಬಾಳ, ರಮೇಶ ಸಳ್ಳೇದ್ ಇದ್ದರು.

ಪದಾಧಿಕಾರಿಗಳ ನೇಮಕ: ಮಸ್ಕಿ ಮಂಡಲ ಅಧ್ಯಕ್ಷ ಶರಣಬಸವ ಸೊಪ್ಪಿಮಠ ವಿವಿಧ ಮೋರ್ಚಾಗಳಿಗೆ ನೂತನ ಪದಾಧಿಕಾ-ರಿಗಳನ್ನು ನೇಮಿಸಿ ಆದೇಶಿಸಿದ್ದಾರೆ.

ಯುವಮೋರ್ಚಾ ಚನ್ನಬಸವ ದೇಸಾಯಿ (ಅಧ್ಯಕ್ಷ), ಗಂಗಾಧರ ಕಂಬಳಿಮಠ, ನಾಗರಾಜ ಪವಾರ್ (ಪ್ರ.ಕಾರ್ಯದರ್ಶಿ), ಹಿಂದುಳಿದ ವರ್ಗಗಳ ಮೋರ್ಚಾ ಬಸವರಾಜ (ಅಧ್ಯಕ್ಷ), ನಾಗರಾಜ ಗಡ್ಯಾಳ, ಅಮರೇಶ ನಾಯಕ (ಪ್ರ.ಕಾಯದರ್ಶಿ), ಎಸ್.ಟಿ ಮೋರ್ಚಾ ರಮೇಶ ನಾಯಕ (ಅಧ್ಯಕ್ಷ), ಸಂಗಮೇಶ ನಾಯಕ, ಹನುಮೇಶ ನಾಯಕ, (ಪ್ರ.ಕಾರ್ಯದರ್ಶಿ), ಎಸ್.ಸಿ ಮೋರ್ಚಾ ಬಸವರಾಜ.ಆರ್.ಡಿ (ಅಧ್ಯಕ್ಷ), ನಾಗಲಿಂಗ, ಮಂಜುನಾಥ ಬಳಗಲ್ (ಪ್ರ.ಕಾರ್ಯದರ್ಶಿ), ಮಹಿಳಾ ಮೋರ್ಚಾ ನಿವೇದಿತಾ (ಅಧ್ಯಕ್ಷೆ) ದುರ್ಗಮ್ಮ, ಅಕ್ಕಮಹಾದೇವಿ (ಪ್ರ. ಕಾರ್ಯದರ್ಶಿ), ರೈತ ಮೋರ್ಚಾ ಶರಣೇಗೌಡ (ಅಧ್ಯಕ್ಷ), ಮಲ್ಲಿಕಾರ್ಜುನ ಪಾಟೀಲ್, ಪ್ರಕಾಶಗೌಡ (ಪ್ರ.ಕಾರ್ಯದರ್ಶಿ), ಅಲ್ಪಸಂಖ್ಯಾತರ ಮೋರ್ಚಾ ಅನ್ವರ್ ವಾಲೇಕಾರ್ (ಅಧ್ಯಕ್ಷ), ಮಹಿಬೂಬ ಕುಷ್ಟಗಿ, ಇಸ್ಮಾಯಿಲ್ ತುರ್ವಿಹಾಳ (ಪ್ರ.ಕಾರ್ಯದರ್ಶಿ) ಗಳನ್ನಾಗಿ ನೇಮಿಸಲಾಗಿದೆ ಎಂದು ತಿಳಿಸಿದರು.

## ಉಪ ಚುನಾವಣೆ ಫಲಿತಾಂಶ: ಅಭಿನಂದನೆ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆಯ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಾದ ಸಮರ್ಥ ಮಲ್ಲಿಕಾರ್ಜುನ ಶಾಮನೂರ ಹಾಗೂ ಉಮೇಶ ಎಚ್.ಮೇಟಿ ಅವರು ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ತಾಳಿಕೋಟಿ ಬ್ಲಾಕ್ ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಆಸೀಫ ಕೆಂಭಾವಿ ಅವರು ಅಭಿನಂದಿಸಿ ಎರಡೂ ಕ್ಷೇತ್ರದ ಮತದಾರರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು ಪಕ್ಷದ ಈ ಇಬ್ಬರೂ ಅಭ್ಯರ್ಥಿಗಳ ಗೆಲುವಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಹಾಗೂ ಅಭಿವೃದ್ಧಿಗೆ ಮತದಾರರು ಮನ್ನಣೆ ನೀಡಿದ್ದಾರೆ. ಬಾಗಲಕೋಟೆ ಕ್ಷೇತ್ರದ ಚುನಾವಣೆಯಲ್ಲಿ ಚುನಾವಣಾ ಉಸ್ತುವಾರಿ ವಹಿಸಿದ ಸಚಿವರಾದ ಸತೀಶ ಜಾರಕಿಹೊಳಿ ಹಾಗೂ ಆರ್ ಬಿ ತಿಮ್ಮಾಪುರ ಅವರ ಮಾರ್ಗದರ್ಶನದಲ್ಲಿ ಸಚಿವರು, ಶಾಸಕರು, ಮುಖಂಡರು ಹಾಗೂ ಪಕ್ಷದ ಕಾರ್ಯಕರ್ತರು ಒಗ್ಗಟ್ಟಿನಿಂದ ಕೆಲಸ ಮಾಡಿದ್ದು ಉಮೇಶ ಮೇಟಿ ಅವರ ಐತಿಹಾಸಿಕ ಗೆಲುವಿಗೆ ಪ್ರಮುಖ ಕಾರಣವಾಗಿದೆ. ಇದರ ಜೊತೆಗೆ ಮುದ್ದೇಬಿಹಾಳ ಮತಕ್ಷೇತ್ರದ ಶಾಸಕರಾದ ಅಪ್ಪಾಜಿ ನಾಡಗೌಡರು ಜವಾಬ್ದಾರಿ ವಹಿಸಿಕೊಂಡು ಶ್ರಮಿಸಿದ ಕ್ಷೇತ್ರದ ಕೆಲವು ಭಾಗಗಳಲ್ಲಿ ಹೆಚ್ಚಿನ ಲೀಡ್ ಬಂದಿದೆ ಅದಕ್ಕಾಗಿ ನಾನು ಅವರನ್ನು ಅಭಿನಂದಿಸುತ್ತೇನೆ.ಈ ಫಲಿತಾಂಶವು 2028ರ ಸಾರ್ವತ್ರಿಕ ಚುನಾವಣೆಗೆ ದಿಕ್ಸೂಚಿಂ-ಯಾಗುವ ಸಾಧ್ಯತೆ ಇದೆ ಎಂದು ತಿಳಿಸಿದರು.

## ಮೇ.13ರಂದು ಕಲ್ಮಲಾ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.13ರ ಬೆಳಿಗ್ಗೆ 8ರಿಂದ ಸಂಜೆ 5 ಗಂಟೆವರೆಗೆ ಕಲ್ಮಲಾ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು,




ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## LPG ಗ್ಯಾಸಿನ ಬೆಲೆ ಏರಿಕೆ? ಕೇಂದ್ರ ಸರ್ಕಾರ ವಿರುದ್ಧ ಆಕ್ರೋಶ :ಖಾಜಾ ಹುಸೇನ್ ಬಿಚ್ಚಾಲಿ

ನೈಜ್ಯ ದೆಸೆ ನ್ಯೂಸ್

ರಾಯಚೂರು: ತಾಲೂಕಿನ ಬಿಚ್ಚಾಲಿ ಗ್ರಾಮದ ಗ್ರಾಮ ಪಂಚಾಯತ್ ಸದಸ್ಯರಾದ ಖಾಜಾ ಹುಸೇನ್ ಅವರು ಇಂದು ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಕೇಂದ್ರ ಸರ್ಕಾರದ ನಿರಂತರ ಬೆಲೆ ಏರಿಕೆ ನೀತಿಯನ್ನು ತೀವ್ರವಾಗಿ ಖಂಡಿಸಿದರು. ಗೃಹ ಬಳಕೆಯ ಐಕಲು ಸಿಲಿಂಡರ್ ಬೆಲೆ ಮತ್ತೆ ಏರಿಕೆಯಾಗಿರುವುದು ಸಾಮಾನ್ಯ ಜನರಿಗೆ, ವಿಶೇಷವಾಗಿ ಬಡವರು ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ದೊಡ್ಡ ಹೊರೆ ಆಗುತ್ತಿದೆ ಎಂದು ಅವರು ಹೇಳಿದರು.

ಈ ಬೆಲೆ ಏರಿಕೆಯ ಪರಿಣಾಮವಾಗಿ ಮಹಿಳೆಯರ ದಿನನಿತ್ಯದ ಜೀವನ ಮತ್ತು ಕುಟುಂಬದ ಆರ್ಥಿಕ ಸ್ಥಿತಿ



ಮೇಲೆ ನೇರ ಪರಿಣಾಮ ಬೀರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು. "ಜನರ ಜೀವನ ಸುಧಾರಿಸಲು ಆಯ್ಕೆಯಾದ ಸರ್ಕಾರವೇ, ಜನರ ಮೇಲೆಯೇ ಹೆಚ್ಚುವರಿ ಭಾರ ಹಾಕುತ್ತಿರುವುದು ವಿಷಾದನೀಯ," ಎಂದು ಅವರು ಅಭಿಪ್ರಾಯಪಟ್ಟರು.


ಕೇಂದ್ರ ಸರ್ಕಾರಕ್ಕೆ ಅವರ ಪ್ರಮುಖ ಆಗ್ರಹಗಳು: LPG ಗ್ಯಾಸಿನ ಬೆಲೆಯನ್ನು ತಕ್ಷಣ ಕಡಿತಗೊಳಿಸಬೇಕು ಬಡ ಹಾಗೂ ಮಧ್ಯಮ ವರ್ಗಕ್ಕೆ ಸಬ್ಸಿಡಿ ಮರುಸ್ಥಾಪಿಸಬೇಕು ಮಹಿಳಾ ಪ್ರಧಾನ ಕುಟುಂಬಗಳಿಗೆ ವಿಶೇಷ ಆರ್ಥಿಕ ಸಹಾಯ ಘೋಷಿಸಬೇಕು ಕೇಂದ್ರ ಸರ್ಕಾರವು ತಕ್ಷಣ ಕ್ರಮ ಕೈಗೊಂಡು ಜನರ ಸಂಕಷ್ಟ ನಿವಾರಣೆಗೆ ಮುಂದಾಗಬೇಕು ಎಂದು ಅವರು ಒತ್ತಾಯಿಸಿದರು.

## ಕಂಪ್ಯೂಟರ್ ಅಂಗಡಿಗಳ ತೆರವಿಗೆ ವಿರೋಧ

ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಕಳೆದ 20–25 ವರ್ಷಗಳಿಂದ ಬೀದಿಬದಿಯಲ್ಲಿ ಕಂಪ್ಯೂಟರ್ ಅಂಗಡಿಗಳನ್ನು ಇಟ್ಟುಕೊಂಡು ಜೀವನ ಸಾಗಿಸುತ್ತಿರುವ ವಿದ್ಯಾವಂತ ನಿರುದ್ಯೋಗಿಗಳಿಗೆ ಕಿರುಕುಳ ನೀಡದೆ, ಸ್ವಯಂ ಉದ್ಯೋಗಕ್ಕೆ ಅವಕಾಶ ಮಾಡಿಕೊಡಬೇಕೆಂದು ಒತ್ತಾಯಿಸಿ, ಕಂಪ್ಯೂಟರ್ ಅಂಗಡಿಗಳ ಸಂಘಟನೆಯ ಪ್ರಮುಖರು ಮತ್ತು ವ್ಯಾಪಾರಸ್ಥರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು.

ಪುರಸಭೆ ವ್ಯಾಪ್ತಿಯಲ್ಲಿ ಕಂಪ್ಯೂಟ-ರ್ ಅಂಗಡಿಗಳನ್ನು ಇಟ್ಟುಕೊಂಡು ಸುಮಾರು 20 ವರ್ಷಗಳಿಂದಲೂ ವ್ಯಾಪಾರ ಮಾಡುತ್ತಿರುವ ಈ ಕುಟುಂಬಗಳಿಗೆ ಸರಕಾರದ ವತಿಯಿಂದ ಗುರುತಿನ ಚೀಟಿ ನೀಡಿ, ಬ್ಯಾಂಕುಗಳ ಮೂಲಕ ಸಾಲ ಸೌಲಭ್ಯವನ್ನು ಕೂಡ ಒದಗಿಸಲಾಗಿದೆ. ಆದರೆ, ಇತ್ತೀಚೆಗೆ ಏಕಾಏಕಿ ಅಂಗಡಿಗಳ ವಿದ್ಯುತ್ ಸಂಪರ್ಕ



ಕಡಿತಗೊಳಿಸುವಂತೆ ಮಾಡಿರುವುದು ನೋಟಿಸ್ ಜಾರಿ ವ್ಯಾಪಾರಸ್ಥರ ಆತಂಕಕ್ಕೆ ಕಾರಣವಾಗಿದೆ.

ವಿದ್ಯಾವಂತ ನಿರುದ್ಯೋಗಿಗಳಾಗಿದ್ದು, ಸುಮಾರು 20–25 ವರ್ಷಗಳಿಂದ ಇದೇ ವೃತ್ತಿಯ ನಂಬಿ ಕುಟುಂಬ ನಿರ್ವಹಣೆ ಮಾಡುತ್ತಿದ್ದೇವೆ. ಬ್ಯಾಂಕಿನಿಂದ ಪಡೆದ ಸಾಲದ ಕಂತುಗಳನ್ನು ಪ್ರತಿ ತಿಂಗಳು ಪಾವತಿಸುತ್ತಿದ್ದು, ಈಗ ಅಂಗಡಿಗಳನ್ನು ತೆರವುಗೊಳಿಸಿದರೆ ಸಾಲ ಮರುಪಾವತಿ ಮತ್ತು ಜೀವನ ನಿರ್ವಹಣೆ ಕಷ್ಟವಾಗುತ್ತದೆ. ಒಂದು ವೇಳೆ ಅಂಗಡಿಗಳನ್ನು ತೆರವುಗೊಳಿಸುವುದು ಅನಿವಾರ್ಯವಾದರೆ, ನಮಗೆ ಪರ್ಯಾಯವಾಗಿ ಸರಕಾರಿ ಜಾಗವನ್ನು ನೀಡಿ ಅನುಕೂಲ ಮಾಡಿಕೊಡಬೇಕು ಎಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಸವರಾಜ್ ಗುಂಟಿ, ಪ್ರತಾಪ್ ಸಿಂಗ್, ವಿಜಯ್ ಸಿಂಗ್, ಕರಡಿ, ನವೀನ್ ಕುಮಾರ್, ಅಜರ್, ನವಾಬ್ ಮನಿಯಾರ್ ಹಾಗೂ ರಜಾಕ್ ಸೇರಿದಂತೆ ಹಲವು ವ್ಯಾಪಾರಸ್ಥರು ಉಪಸ್ಥಿತರಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಬೇಸಿಗೆಯಲ್ಲಿ ಆರೋಗ್ಯದ ರಕ್ಷಣೆಗೆ ಹೆಚ್ಚಿನ ಆಧ್ಯತೆ ನೀಡಿ: ಡಾ.ಸುರೇಂದ್ರ ಬಾಬು

ನೈಜ್ಯ ದೆಸೆ ನ್ಯೂಸ್

ರಾಯಚೂರು: ಜಿಲ್ಲೆಯಾದ್ಯಂತ ಪ್ರಸ್ತುತ ದಿನಗಳಲ್ಲಿ ಬಿಸಿಲಿನ ಪ್ರಕರತೆ ಮತ್ತು ತೀವ್ರತೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಮಕ್ಕಳು ಹಾಗೂ ವಯೋವೃದ್ದರು ಆರೋಗ್ಯದ ಬಗ್ಗೆ ಮುನ್ನೆಚ್ಚ-ರಿಕೆ ಕ್ರಮಗಳನ್ನು ಪಾಲಿಸುವ ಮೂಲಕ ಆರೋಗ್ಯದ ರಕ್ಷಣೆಗೆ ಹೆಚ್ಚಿನ ಆಧ್ಯತೆ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.

ಮೇ.04ರ ಸೋಮವಾರ ದಂದು ಜಿಲ್ಲೆಯ ದೇವದುರ್ಗ ಪಟ್ಟಣದ ತಾಲೂಕಾ ಸಾರ್ವಜನಿಕ ಆಸ್ಪತ್ರೆಯಲ್ಲಿ ಬೇಸಿಗೆ ಶಾಖಾಘಾತ ನಿರ್ವಹಣೆಯ ವಾರ್ಡ್, ಹಾಗೂ ಇತರೆ ವಾರ್ಡ್ಗ ಭೇಟಿ ನೀಡಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಪ್ರತಿದಿನ ಮಧ್ಯಾಹ್ನದಲ್ಲಿ ಬಿಸಿಲು 40 ಡಿಗ್ರಿ ಮೇಲ್ಪಟ್ಟು ಹಾಗೂ ಪ್ರಖರವಾಗಿರುವ ಹಿನ್ನೆಲೆಯಲ್ಲಿ ಮನೆಯಿಂದ ಹೊರಗೆ ಹೋಗುವಾಗ ಆದಷ್ಟು ಹತ್ತಿ ಬಟ್ಟೆ ಉಡುಗೆ ಜೊತೆಯಲ್ಲಿ ಕುಡಿಯುವ ನೀರು,



ಛತ್ರಿ ಬಳಸಲು ಆಧ್ಯತೆ ನೀಡಿ, ಆದಷ್ಟು ದ್ರವ ಆಹಾರ ಸೇವನೆ ಮತ್ತು ಮನೆಯಲ್ಲಿ ಚಿಕ್ಕ ಮಕ್ಕಳು, ಗರ್ಭಿಣಿ, ಬಾಣಂತಿಯರು, ದೀರ್ಘಕಾಲಿನ ಚಿಕಿತ್ಸೆಗೆ ಒಳಪಟ್ಟವರು, ವಯೊವೃದ್ದರ ಕಾಳಜಿಗಾಗಿ ಕುಟುಂಬದ ಸದಸ್ಯರು ಹೆಚ್ಚಿನ ಆಧ್ಯತೆ ನೀಡಬೇಕು.

ಪ್ರತಿಯೊಬ್ಬರೂ ಮನೆಯಲ್ಲಿ ಓಆ-ರ್ಎಸ್ ಜೀವಜಲ ಬಳಕೆಗೆ ಆಧ್ಯತೆ ನೀಡುವ ಮೂಲಕ ನಿರ್ಜಲಿಕರಿಣದಿಂದ ದೇಹದ ನೀರಿನ ಅಂಶದ ಜೊತೆಗೆ ಲವಣಾಂಶ ಕಡಿಮೆಯಾಗದಂತೆ ಓಆರ್ಎಸ್ ಜೀವ ಜಲ ಪ್ಯಾಕೆಟ್ ಸದಾ ಮನೆಯಲ್ಲಿರಲಿ ಅಲ್ಲದೆ ಒಂದು ಲೀಟರ್ ನೀರಿಗೆ ಪ್ಯಾಕೇಟ್‌ನಲ್ಲಿಯ ಸಂಪೂರ್ಣ ಪುಡಿ ಹಾಕಿ ದ್ರಾವಣ ಸಿದ್ದಪಡಿಸಿ 24 ಗಂಟೆಯೊಳಗೆ ಬಳಸಬೇಕು. ಇದಲ್ಲದೆ ಲಿಂಬೂ ಪಾನಕ, ಎಳೆನೀರು, ಮಜ್ಜಿಗೆ, ಗಂಜಿ, ಆಹಾರದಲ್ಲಿ ಬೇಳೆ ತಿಳಿ ಬಳಸಬೇಕು. ಪ್ರಖರ ಬಿಸಿಲಿನ ಅವಧಿಯಲ್ಲಿ ಆದಷ್ಟು ಮನೆಯ ಹೊರಗೆ ಹೋಗದಂತೆ ಮುತವರ್ಜಿ ವಹಿಸಿಬೇಕು. ಮನೆಯ ಒಳಗೆ ಅಥವಾ ನೆರಳು ಇರುವ ಸ್ಥಳದಲ್ಲಿ ವಿಶ್ರಾಂತಿ ಪಡೆಯಬೇಕಿದೆ. ಆದಷ್ಟು ಮಸಾಲೆಯುಕ್ತ ಪದಾರ್ಥಗಳ ಸೇವನೆ ಕಡಿಮೆ ಇರಬೇಕು. ಅಧಿಕ ಬಿಸಿಲಿರುವ ಸಮಯದಲ್ಲಿ ಮನೆಯ ಹೊರಗೆ ಹೊಗದಿರಲು ಯೋಚಿಸಿ, ದೈನಂದಿನವಾಗಿ ತೆಗೆದುಕೊಳ್ಳುವ ಮಾತ್ರೆಗಳನ್ನು ಜೊತೆಯಲ್ಲಿ-ರಿಸಿಕೊಳ್ಳಿ, ದ್ರವ ಆಹಾರ ಹೆಚ್ಚು ಸೇವಿಸಬೇಕು.

ಆಟವಾಡುವ ಮಕ್ಕಳು ಬಿಸಿಲಿನಲ್ಲಿ ನಿಲ್ಲಿಸಿರುವ ವಾಹನ ಮುಟ್ಟದಂತೆ ಜಾಗೃತಿ ವಹಿಸಬೇಕು. ಮಕ್ಕಳು ಅಸುರಕ್ಷಿತ ಆಹಾರ, ಪಾನೀಯ ಸೇವಿಸದಂತೆ ನಿಗಾವಹಿಸಿ. ನವಜಾತ ಶಿಶುವಿನ ಬಗ್ಗೆ ಕಾಳಜಿ ಇರಲಿ: ಹೆ-ರಿಗೆ ನಂತರ ಬಾಣಂತಿಯರು ನವಜಾತ ಶಿಶುವಿಗೆ ಮೇಲಿಂದ ಮೇಲೆ ಎದೆ ಹಾಲುಣಿಸುವ ಮೂಲಕ ಶಿಶುವಿನಲ್ಲಾಗುವ ನಿರ್ಜಲೀಕರಣ ತಡೆಯಲು ಸಹಕಾರಿಯಾಗುವುದು. ಯಾವುದೇ ಕಾರಣ-ಕ್ಕೂ 6 ತಿಂಗಳೊಳಗಿನ ಮಗುವಿಗೆ ತಾಯಿ ಹಾಲು ಮಾತ್ರ ಕುಡಿಸಬೇಕು. ಅಲ್ಲದೆ ರೋಗ ನಿರೋಧಕ ಶಕ್ತಿ ವೃದ್ದಿಸಲು 12 ಮಾರಕ ರೋಗಗಳ ವಿರುದ್ಧ ಲಸಿಕೆ ಹಾಕಿಸಲು ಮರೆಯಬಾರದು.

ಜಿಲ್ಲಾ ಎನ್‌ಪೋರ್ಸಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಜಿಲ್ಲಾ ವಿಪತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗಸೂಚಿಯನ್ವಯ ಆರೋಗ್ಯ ಇಲಾಖೆ ಸಿಬ್ಬಂದಿ ಎಲ್ಲ ಆಸ್ಪತ್ರೆಯ ಬರುವ ಜನತೆಗೆ ಗ್ರಾಮಗಳಲ್ಲಿ ಹತ್ತಿ ಉಡುಪು ಬಳಕೆ, ಛತ್ರಿ, ಜೊತೆಯಲ್ಲಿ ನೀರು ಇರುವಂತೆ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಎಂದರು. ಜಿಲ್ಲೆಯ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಓಆರ್ಎಸ್ ಜೀವ ಜಲ ಪ್ಯಾಕೇಟ್ ಸೇರಿದಂತೆ ಅಗತ್ಯ ಮುಂಜಾಗ್ರತಾ ಔಷಧಿಗಳು ಲಭ್ಯವಿವೆ. ಯಾವುದೇ ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗ ಪಡೆಯಬಹುದಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ ಕೆ., ತಾಲೂಕಾ ಆರೋಗ್ಯಾಧಿಕಾರಿ ಡಾ.ಬನದೇಶ್ವರ, ಸಾರ್ವಜನಿಕ ಆಸ್ಪತ್ರೆಯ ವೈದ್ಯರಾದ ಡಾ.ಗಂಗಾಧರ್, ಡಾ.ಶಿವಕುಮಾರ್, ಡಾ.ನಾಗರಾಜ ಮಲ್ಕಾಪೂರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸೋಮಪ್ಪ ಸೇರಿದಂತೆ ಸಿಬ್ಬಂದಿಯವರು ಹಾಗೂ ಸಾರ್ವಜನಿಕರು ಇದ್ದರು.

## ನೇಮಕಾತಿ ಪ್ರಕಟಣೆ

ಭಾರತೀಯ ನೌಕಾಪಡೆಯ ನೇಮಕಾತಿ 2026 15 SSC ಕಾರ್ಯನಿರ್ವಾಹಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಮೇ 6, 2026 by ಶಶಿ ಭಾರತೀಯ ನೌಕಾಪಡೆಯ ನೇಮಕಾತಿ 2026: 15 SSC ಕಾರ್ಯನಿರ್ವಾಹಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಭಾರತೀಯ ನೌಕಾಪಡೆಯು ಮೇ 2026 ರ ಅಧಿಕೃತ ಅಧಿಸೂಚನೆಯ ಮೂಲಕ SSC ಕಾರ್ಯನಿರ್ವಾಹಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಅಖಿಲ ಭಾರತ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 01–ಜೂನ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 15–05–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 01–ಜೂನ್–2026 ಅಧಿಕೃತ ವೆಬ್‌ಸೈಟ್: joinindiannavy.gov.in

# ವಿಶ್ವ ಕೈ ನೈರ್ಮಲ್ಯ ದಿನಾಚರಣೆ ಜೀವಿಗಳನ್ನು ಉಳಿಸಿ ನಿಮ್ಮ ಕೈಗಳನ್ನು ಸ್ವಚ್ಛಗೊಳಿಸಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಸಮೀಪದ ಅರಗಿನ ಮರ ಕ್ಯಾಂಪ್ ಹತ್ತಿರದ ಪುನರ್ವಸತಿ ಕೇಂದ್ರದಲ್ಲಿ. ವಿಶ್ವ ಕೈ ನೈರ್ಮಲ್ಯ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದ ಕುರಿತು ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಪ್ರತಿ ವರ್ಷವೂ ಈ ಕೈ ನೈರ್ಮಲ್ಯ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ.**

ಎಲ್ಲಾ ವಯಸ್ಸಿನ ಜನರು ಆರೋಗ್ಯ ಉತ್ತಮ ಗೊಳ್ಳಿಸುವುದು ಜೀವಿಗಳನ್ನು ಉಳಿಸಿ ಹಂತದಲ್ಲಿ ಕೈ ನೈರ್ಮಲ್ಯ ಕಾಪಾಡುವುದು ಬಹಳ ಮಹತ್ವ ಪಡೆದಿದೆ ಕೈಗಳನ್ನು ಸ್ವಚ್ಛವಾಡಿಟ್ಟು ಕೊಳ್ಳುವುದು ಸಾಬೂನು ಮತ್ತು ನೀರಿನಿಂದ ಕೈಗಳನ್ನು ಸ್ವಚ್ಛವಾಡಿಟ್ಟು ಕೊಳ್ಳುವುದು ಸೋಂಕು



ಮತ್ತು ರೋಗಾಣುಗಳನ್ನು ಕೊಲ್ಲುವುದು ಇದರಿಂದ ಆರೋಗ್ಯ ಉತ್ತಮ ಗೊಳ್ಳುತ್ತದೆ. ಅಮೂಲ್ಯ ಜೀವಗಳನ್ನು ಉಳಿಸಲು ನಮ್ಮ ಕೈಗಳನ್ನು ಸ್ವಚ್ಛಗೊಳಿಸುವುದು ಮರೆಯಬಾರದು ಆಹಾರ ತಯಾರಿಸುವ ಮೊದಲು ಮತ್ತು ತಿನ್ನುವ ಮೊದಲು . ಶೌಚಾಲಯ ಬಳಿಸಿದ ನಂತರ. ಪ್ರಾಣಿಗಳನ್ನು ಮುಟ್ಟಿದ ನಂತರ ಹಾಗೂ ತ್ಯಾಜ್ಯ ವಸ್ತುಗಳನ್ನು ಎಸೆದು ನಂತರ. ಕೆಮ್ಮ ಹಾಗೂ ಸೀನಿದ ನಂತರ ಅನಾರೋಗ್ಯದ ಬಳಲುತ್ತಿರುವವರು ಮುಟ್ಟಿದ ನಂತರ ಕೈಗಳನ್ನು ಸ್ವಚ್ಛಗೊಳಿಸುವುದು ಮರೆಯಬಾರದು ಉತ್ತಮ ಆರೋಗ್ಯಕ್ಕಾಗಿ ಕೈ ಮೇಲೆ ಇರುವ ಕಣ್ಣಿಗೆ ಕಾಣದೆ ಇರುವ ಸೋಂಕು ಮತ್ತು ಬ್ಯಾಕ್ಟೀರಿಯಾ ರೋಗಾಣುಗಳನ್ನು ತಡೆಗಟ್ಟಲು ಕೈ ನೈರ್ಮಲ್ಯ ಕಾಪಾಡುವುದು ಬಹಳ ಮಹತ್ವದ್ದು ಪಡೆದಿದೆ ಎಂದರು. ನಂತರ ಮಾತನಾಡಿದ ಆಶಾ ಕಾರ್ಯಕರ್ತೆ ಲಕ್ಷ್ಮಿ ಅವರು ತಮ್ಮ ಮನೆ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಡಿಟ್ಟು ಕೊಳ್ಳುವುದು ಹಾಗೂ ಮಕ್ಕಳಿಗೆ ಆಹಾರ ತಯಾರಿಸುವ ಮೊದಲು ಮತ್ತು ಊಟದ ನಂತರ ಕೈಗಳನ್ನು ತಾಯಿಂದಿರು ಸ್ವಚ್ಛಗೊಳಿಸಲು ಮರೆಯಬಾರದು ತಾಯಿ ಮತ್ತು ಮಕ್ಕಳ ಆರೋಗ್ಯದ ದೃಷ್ಟಿಯಿಂದ ಒಳ್ಳೆಯದು ಮಕ್ಕಳಿಗೆ ಊಟ ಮಾಡಿಸುವ ಮೊದಲು ಸ್ವಚ್ಛವಾಗಿ ಕೈಗಳನ್ನು ತೊಳೆಯುವುದು ಮರೆಯಬಾರದು ಎಂದರು. ಈ ಸಂದರ್ಭದಲ್ಲಿ ಪುನರ್ವಸತಿ ಕೇಂದ್ರದ ತಾಯಿಂದಿರು ಮಕ್ಕಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

## ಮೇ.12ರಂದು ಗಿಲ್ಲೇಸೂಗೂರು ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಗಿಲ್ಲೇಸೂಗೂರು ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಮೇ.12ರ ಬೆಳಿಗ್ಗೆ 8ರಿಂದ ಸಂಜೆ 05ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು,**




ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## "ಕವಿಗೋಷ್ಠಿಗೆ ಹೆಸರು ನೋಂದಣಿಗೆ ಮನವಿ"

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದಲ್ಲಿ ಯುವಜನ ಬಳಗದ ವತಿಯಿಂದ ಮೇ 17ರಂದು ಯುವ ಸಾಹಿತ್ಯ ಸೌರಭ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಈ ಕಾರ್ಯಕ್ರಮದಲ್ಲಿ ಕವನ ಸಂಕಲನಗಳ ಲೋಕಾರ್ಪಣೆ, ಕವಿಗೋಷ್ಠಿ ಆಯೋಜನೆಗೆ ತೀರ್ಮಾನಿಸಲಾಗಿದೆ.**




ಕವಿಗೋಷ್ಠಿಯಲ್ಲಿ ಭಾಗವಹಿಸಲು ಆಸಕ್ತ ತಾಲ್ಲೂಕಿನ ಕವಿಗಳು ತಮ್ಮ ಹೆಸರನ್ನು ಮೇ 14ರೊಳಗೆ ನೋಂದಾಯಿಸಬೇಕು. ಹೆಸರು ನೋಂದಣಿಗೆ ಯುವಜನ ಬಳಗದ ಸಂಚಾಲಕ ಡಾ.ಸೈಯದ್ ಮುಜೀಬ್ ಅಹ್ಮದ್ 90089 90183 ಹಾಗೂ ರವಿಶರ್ಮಾ ಜಾನೇಕಲ್ 82175 85525 ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ಮೂಲಕ ಕೋರಲಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಮಸ್ಕಿ: ಕನ್ನಡ ಸಾಹಿತ್ಯ ಪರಿಷತ್ತಿನ 112 ನೇ ಸಂಸ್ಥಾಪನಾ ದಿನಾಚರಣೆ



ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲ್ಲೂಕ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಪಟ್ಟಣದಲ್ಲಿರುವ ಸನ್ ರೈಸ್ ಮಹಿಳಾ ಡಿಗ್ರಿ ಕಾಲೇಜ್ ನಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ112 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ನಡೆಯಿತು, ಉದ್ಘಾಟನೆಯನ್ನು ಶ್ರೀ ರುದ್ರಯ್ಯಸ್ವಾಮಿ ಹಿರೇಮಠ ಅಧ್ಯಕ್ಷರು ಸನ್ ರೈಸ್ ಮಹಿಳಾ ಡಿಗ್ರಿ ಕಾಲೇಜ್ ಇವರು ನೇರವೇರಿಸಿ, ಮಾತನಾಡಿ ಮುಂಬರುವ ದಿನಗಳಲ್ಲಿ ಕಸಾಪವು ತಾಲ್ಲೂಕಿನಲ್ಲಿ ಹೆಚ್ಚು ಹೆಚ್ಚು ಕನ್ನಡ ವಿಷಯವಾಗಿ ಕಾರ್ಯಕ್ರಮಗಳು ನಡೆಯಿಲಿ ಎಂದು ಹೇಳಿದರು.**

ನಂತರ ವಿಶೇಷ ಉಪನ್ಯಾಸಕರಾಗಿ ಮಾತನಾಡಿದ ಎಸ್ ದೇವೆಂದ್ರಗೌಡ ಸಿಂಧನೂರು ಕನ್ನಡ ಸಂಸ್ಕೃತಿ, ವಿಚಾರಧಾರೆಗಳನ್ನು ಮನೆಮನೆಗೆ ಮುಟ್ಟುವಂತಹ ಕೆಲಸ,ಕನ್ನಡ ಶಾಲೆಗಳನ್ನು ಉಳಿಸುವ ಗುರುತರ ಜವಾಬ್ದಾರಿ ನಾವೆಲ್ಲರೂ ಮಾಡಬೇಕು ಎಂದು ಹೇಳಿದರು.ನಂತರ ಎಸ್ ಎಸ್ ಎಲ್ ಸಿ ಕನ್ನಡ ವಿಷಯದಲ್ಲಿ 125 ಕ್ಕೆ 125 ತೆಗೆದುಕೊಂಡ ತಾಲ್ಲೂಕಿನ ವಿದ್ಯಾರ್ಥಿಗಳಿಗೆ ಗೌರವಿಸಿ ಪ್ರಶಸ್ತಿ ಪತ್ರವನ್ನು ನೀಡಲಾಯಿತು. ಅಧ್ಯಕ್ಷತೆಯನ್ನು ವಿದ್ಯಾವತಿ ಎಲ್ ವನಕಿ ತಾಲ್ಲೂಕ ಕಸಾಪ ಅದ್ಯಕ್ಷೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಮಹಾಂತೇಶ ಮಸ್ಕಿ, ಘನಮಠದಯ್ಯಸ್ವಾಮಿ ಸಾಲಿಮಠ,ಕಳಕಪ್ಪ ಹಾದಿಮನಿ, ಸುಭಾಷ ಸಿಂಗ್ ಹಜಾರೆ,ಮಹೇಶ್ವರ ಶಿಕ್ಷಕರು, ಗುಂಡೂರಾವ್ ದೇಸಾಯಿ ಹಾಗೂ ಇನ್ನಿತರರು ಇದ್ದರು.

# ಮುದ್ದೇಬಿಹಾಳ ತಾಲೂಕು ಆಸ್ಪತ್ರೆಯಲ್ಲಿ ಅವ್ಯವಸ್ಥೆ: ಬಾಣಂತಿಯರ ಗಂಭೀರ ಆರೋಪ

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ಪಟ್ಟಣದ ತಾಲೂಕು ಸರ್ಕಾರಿ ಆಸ್ಪತ್ರೆಯಲ್ಲಿ ಸೌಲಭ್ಯಗಳ ಕೊರತೆ ಮತ್ತೆ ಬಯಲಿಗೆ ಬಂದಿದೆ. ಮಂಗಳವಾರ ಆಸ್ಪತ್ರೆಯಲ್ಲಿ ಬಾಣಂತಿಯರ ಗದ್ದಲ ಉಂಟಾಗಿದ್ದು, ದೀರ್ಘಕಾಲದಿಂದ ದುರಸ್ತಿ ನೆಪದಲ್ಲಿ ಸ್ಥಗಿತಗೊಂಡಿದ್ದ ಶಸ್ತ್ರಚಿಕಿತ್ಸೆಗಳು (ಆಪರೇಷನ್‌ಗಳು) ಮರುಪ್ರಾರಂಭವಾದ ಹಿನ್ನೆಲೆಯಲ್ಲಿ ನೂರಾರು ತಾಯಂದಿರು ಹಸುಗೂಸುಗಳೊಂದಿಗೆ ಆಸ್ಪತ್ರೆಗೆ ಆಗಮಿಸಿದರು.**

ಆದರೆ, ಏಕಾಏಕಿ ಹೆಚ್ಚಾದ ಜನಸಂದಣಿಯನ್ನು ಎದುರಿಸಲು ಆಸ್ಪತ್ರೆ ಆಡಳಿತ ಸಮರ್ಪಕ ಸಿದ್ಧತೆ ಮಾಡಿಕೊಂಡಿರಲಿಲ್ಲ ಎಂಬ ಆರೋಪ ಕೇಳಿಬಂದಿದೆ. ಬಿಪಿ, ಶುಗರ್ ಸೇರಿದಂತೆ ಅಗತ್ಯವಾದ ರಕ್ತ ಪರೀಕ್ಷೆಗಳನ್ನು



ಸಮಯಕ್ಕೆ ಸರಿಯಾಗಿ ಮತ್ತು ಸಮರ್ಪಕವಾಗಿ ನಡೆಸದೇ ಇರುವುದರಿಂದ ತಾಯಂದಿ–ರಿಗೆ ತೊಂದರೆ ಉಂಟಾಗಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಬೇಸಿಗೆ ಬಿಸಿಲಿನ ತೀವ್ರತೆಯಿಂದ ಜನರು ಈಗಾಗಲೇ ಕಂಗೆಟ್ಟಿರುವ ಪರಿಸ್ಥಿತಿಯಲ್ಲಿ, ಬಾಣಂತಿಯರು ಮತ್ತು ಹಸುಗೂಸುಗಳಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ವಿಶ್ರಾಂತಿ ಸ್ಥಳ ಹಾಗೂ ತ್ವರಿತ ವೈದ್ಯಕೀಯ ಸೇವೆಗಳ ಕೊರತೆ ಮತ್ತಷ್ಟು

**"ನಾವು ಚಿಕಿತ್ಸೆಗಾಗಿ ಬರುತ್ತೇವೆ, ಕಷ್ಟ ಅನುಭವಿಸಲು ಅಲ್ಲ. ಬಾಣಂತಿಯ–ರಿಗೂ, ಹಸುಗೂಸುಗಳಿಗೂ ಸೂಕ್ತ ಸೌಲಭ್ಯ ಒದಗಿಸುವುದು ಆಸ್ಪತ್ರೆಯ ಮೊದಲ ಕರ್ತವ್ಯವಾಗಬೇಕು." ಜಿ.ಎಂ. ರಾಠೋಢ, ಗ್ರಾಮೀಣ ಭಾಗದ ಬಾಣಂತಿ ಮಹಿಳೆ**

ಸಂಕಷ್ಟ ತಂದಿದೆ. ಸಾಲಿನಲ್ಲಿ ಗಂಟೆಗಳ ಕಾಲ ನಿಂತು ಚಿಕಿತ್ಸೆ ಪಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಕೆಲವರು ಅಸಹನೆಯಿಂದ ವಾಗ್ವಾದಕ್ಕೂ ಮುಂದಾದ ಘಟನೆ ನಡೆದಿದೆ. ಆಸ್ಪತ್ರೆ ಆಡಳಿತವು ಇಂತಹ ಅಸಮರ್ಪಕ ವ್ಯವಸ್ಥೆಯನ್ನು ತಕ್ಷಣ ಸರಿಪಡಿಸಿ, ಬಾಣಂತಿಯರು ಮತ್ತು ಶಿಶುಗಳಿಗೆ ಅಗತ್ಯವಿರುವ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

# ದೇವಿನಗರದ ನಿವಾಸಿಯಾದ ಲಕ್ಷ್ಮೀ ಕಾಣೆ: ಪತ್ತೆಗೆ ನೇತಾಜಿ ನಗರ ಪೊಲೀಸರ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರಿನ ನೇತಾಜಿ ಪೊಲೀಸ್ ಠಾಣೆಯ ವ್ಯಾಪ್ತಿಯ ದೇವಿನಗರದ ನಿವಾಸಿಯಾದ ಲಕ್ಷ್ಮೀ ಗಂಡ ತಿಮ್ಮಪ್ಪ (43) ಎಂಬ ಮಹಿಳೆಯು 2026ರ ಮಾರ್ಚ್ 27ರ ಬೆಳಿಗ್ಗೆ 11.30 ಗಂಟೆಯ ಸುಮಾರಿಗೆ ಕೆಲಸ ಮಾಡಿದ ಸಂಬಳವನ್ನು ತೆಗೆದುಕೊಂಡು ಬರುತ್ತೇನೆ ಅಂತಾ ಹೇಳಿ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ನೇತಾಜಿ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 36/2026 ಕಲಂ ಅಡಿಯಲ್ಲಿ ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಕೊಳ್ಳಲಾಗಿದೆ.**



ಕಾಣೆಯಾದ ಮಹಿಳೆಗೆ ಪೂರ್ಣಿಮಾ, ತಾನು, ಶ್ರೀಧರ್, ಚರಣ ಕುಮಾರ್, ವಿನಯ ಕುಮಾರ್ ಎಂಬ ಮಕ್ಕಳಿದ್ದು, ಕಾಣೆಯಾದ ಮಹಿಳೆಯ ಗಂಡ ತಿಮ್ಮಪ್ಪ ಇವರು ಒಂದು ವರ್ಷದ ಹಿಂದೆ ಲಿವರ್ ವೈಫಲ್ಯವಾಗಿ ಮೃತಪಟ್ಟಿದ್ದಾರೆ. ಕಾಣೆಯಾದ ಮಹಿಳೆಯ ಚಹರೆ ಪಟ್ಟಿ: ವಯಸ್ಸು 43 ವರ್ಷ, ಜಾತಿ ಎಸ್.ಸಿ (ಮಾದಿಗ), ಉದ್ಯೋಗ ಸಿಲ್ವರ್ ಸ್ಪೂನ್ ಹೋಟೆಲ್‌ನಲ್ಲಿ ಕೆಲಸ ಮಾಡಲಾಗುತ್ತಿದ್ದು, ಕೋಲು ಮುಖ, ಕಪ್ಪು ಮೈಬಣ್ಣ, ಕಪ್ಪು ಕೂದಲು, ಬಲಗೈ ಮುಂಗೈ ಮೇಲೆ ಟಿಎಲ್ ಅಂತಾ ಅಚ್ಚೆ ಇರುತ್ತದೆ. ಬಂಗಾರದ ಬಣ್ಣದ ಸೀರೆ, ಕೆಂಪು ಬಣ್ಣದ ಕುಬುಸ ಉಡುಪು ಧರಿಸಲಾಗಿದೆ. ಕನ್ನಡ, ತೆಲುಗು ಹಾಗೂ ಹಿಂದಿ ಭಾಷೆ ಮಾತನಾಡುತ್ತಾಳೆ. ಕಾಣೆಯಾದ ಮಹಿಳೆಯ ಸುಳಿವು ಸಿಕ್ಕಲ್ಲಿ ನೇತಾಜಿನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 08532–240222 ಅಥವಾ ರಾಯಚೂರು ನಗರ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ: 08532–235635, 08532–235100, 9480803800 ಅಥ–'ವಾ ಪಿ.ಎಸ್.ಐ ಮೊಬೈಲ್: 9480803846, ನೇತಾಜಿ ನಗರ ಠಾಣೆ ಹಾಗೂ ಸಿ.ಪಿ.ಐ ಪಶ್ಚಿಮ ವೃತ್ತ ರಾಯಚೂರು ಮೊಬೈಲ್ ಸಂಖ್ಯೆ: 9480803831ಗೆ ಸಂಪರ್ಕ ಮಾಡಬಹುದಾಗಿದೆ ಎಂದು ನೇತಾಜಿ ನಗರ ಪೊಲೀಸ್ ಠಾಣೆಯು ಪ್ರಕಟಣೆಯಲ್ಲಿ ತಿಳಿಸಿದೆ.

# ಅಂತರಾಷ್ಟ್ರೀಯ ಕಾರ್ಮಿಕ ದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ತಾಲೂಕು ಆಡಳಿತ, ತಾಲೂಕು ಕಾನೂನು ಸೇವಾ ಸಮಿತಿ ಮಾನ್ವಿ ಹಾಗೂ ತಾಲೂಕು ನ್ಯಾಯವಾದಿಗಳ ಸಂಘ ಮತ್ತು ಕಾರ್ಮಿಕ ಇಲಾಖೆ ಸಂಯುಕ್ತಾಶ್ರಯದಲ್ಲಿ ನಡೆದ ಅಂತರಾಷ್ಟ್ರೀಯ ಕಾರ್ಮಿಕ ದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಸಿವಿಲ್ ನ್ಯಾಯಧೀಶರಾದ ಆನಂದ ಹೆಚ್.ಕೊಣ್ಣೂರು ಉದ್ಘಾಟಿಸಿ ಮಾತನಾಡಿ ಶೋಷಿತ ವರ್ಗವಾಗಿರುವ ಕಾರ್ಮಿಕರು ದೇಶದ ಬೆನ್ನೆಲುಬಾಗಿರುವ ಕಾರ್ಮಿಕರಿಗೆ ಸಂವಿಧಾನದಲ್ಲಿ ಅನೇಕ ಹಕ್ಕುಗಳನ್ನು ,ಗೌರವವನ್ನು ಕಾರ್ಮಿಕ ಕಾಯ್ದೆಯಡಿಯಲ್ಲಿ ನೀಡಲಾಗಿದೆ ಸಮಾನ ಕೆಲಸಕ್ಕೆ ಸಮಾನವಾದ ವೇತನ, ಕೆಲಸದ ಸ್ಥಳದಲ್ಲಿ ಕಾರ್ಮಿಕರ ಸುರಕ್ಷತೆ, ಕೆಲಸದ ನಿಗದಿತ ಸಮಯದ ಮಿತಿ, ಸೇರಿದಂತೆ ಕಾರ್ಮಿಕರಿಗೆ ಅನೇಕ ಕಾಯ್ದೆಗಳನ್ನು ನೀಡಲಾಗಿದೆ.**

ಕಟ್ಟಡ ಕಾರ್ಮಿಕರ ಕಲ್ಯಾಣಕ್ಕಾಗಿ ಕಟ್ಟಡ ಕಾರ್ಮಿಕರ ಕಾಯ್ದೆಗಳಿದ್ದು ಕಾರ್ಮಿಕರಿಗೆ ಬಹುಳಷ್ಟು ಅನುಕೂಲವಾಗುತ್ತಿದೆ ಕಟ್ಟಡ ಕಾರ್ಮಿಕರ ಮಕ್ಕಳ ಮದುವೆ,ವಿದ್ಯಾಭ್ಯಾಸಕ್ಕೆ ,ಹೆರಿಗೆ,ಸೇರಿದಂತೆ ಕೆಲಸದ ಸ್ಥಳದಲ್ಲಿ ಅಪಘಾತ ಸಂದರ್ಭದಲ್ಲಿ ಸೌಲಭ್ಯ




ಮತ್ತು ಪರಿಹಾರವನ್ನು ಪಡೆದುಕೊಳ್ಳುವುದಕ್ಕೆ ಅವಕಾಶ ನೀಡಲಾಗಿದೆ. ಕಾರ್ಮಿಕರು ತಮ್ಮಗೆ ಅನುಕೂಲವಾಗಿರುವ ಕಾನೂನುಗಳ ಬಗ್ಗೆ ಮಾಹಿತಿಯನ್ನು ಪಡೆದುಕೊಂಡಾಗ ಮಾತ್ರ ಅವುಗಳಿಂದ ಪರಿಹಾರವನ್ನು ಪಡೆದುಕೊಳ್ಳುವುದಕ್ಕೆ ಅನುಕೂಲವಾಗುತ್ತದೆ ಆರ್ಥಿಕವಾಗಿ ಹಿಂದುಳಿದಿರುವ ಕಾರ್ಮಿಕರು ಉಚಿತ ಕಾನೂನು ನೆರವನ್ನು ತಾಲೂಕು ಕಾನೂನು ಸೇವಾ ಸಮಿತಿಯ ಮೂಲಕ ಪಡೆದುಕೊಳ್ಳುವುದಕ್ಕೆ ಅವಕಾಶವಿದೆ ಎಂದು ತಿಳಿಸಿದರು.

ತಾಲೂಕು ಕಾರ್ಮಿಕ ನಿರೀಕ್ಷಕರಾದ ಮಲ್ಲಪ್ಪ ದೊರೆ ಮಾತನಾಡಿ ದೈಹಿಕ,ಮಾನಸಿಕ,ಬೌದಿಕವಾಗಿ ಶ್ರಮವಾಹಿಸಿ ದುಡಿಯುವ ಕಾರ್ಮಿಕರು ಶೇ 30 ರಷ್ಟು ಇದ್ದರೆ. ಕಟ್ಟಡ ಕಾರ್ಮಿಕರು ಸೇರಿದಂತೆ ಎಲ್ಲಾ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದು ಅವುಗಳ ಸದುಪಯೋಗವನ್ನು ಕಾರ್ಮಿಕರು ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಸಹಾಯಕ ಸರಕಾರಿ ಅಭಿಯೋಜ–ಕರಾದ ಅರ್ಚನಾಯಾದವ್ ಮಾತನಾಡಿದರು ಸ್ಥಳಿಯವಾಗಿರುವ ವಿವಿಧ ಅಂಗಡಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಸಂಸ್ಥೆಯವರು ಕಡ್ಡಾಯವಾಗಿ ಅದೇಶ ಪತ್ರವನ್ನು ನೀಡಬೇಕು. ವಾರಕ್ಕೆ ಒಮ್ಮೆ ರಜೆ ನೀಡಬೇಕು. ಕನಿಷ್ಟ 15 ಸಾವಿರ ವೇತನ ನೀಡಬೇಕು. ಹಾಜರತಿ ಇಡಬೇಕು, 8 ತಾಸಿಗಿಂತ ಹೆಚ್ಚಿನ ಸಮಯ ಕೆಲಸವನ್ನು ಮಾಡಿದಲ್ಲಿ ಹೆಚ್ಚುವರಿ ವೇತನ ನೀಡಬೇಕು.

ಮಹಿಳೆಯರಿಗೆ ಹೆರಿಗೆ ವೇತನ ಸಹಿತ ರಜೆ ನೀಡಬೇಕು, ಸುಧಾರಿತ ಸುರಕ್ಷ ಸಲಾಕರಣೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಾರ್ಮಿಕರಿಗೆ ನೀಡಬೇಕು ಕಾರ್ಮಿಕ ಕಾಯ್ದೆಗಳನ್ನು ಉಲ್ಲಾಂಘಿ–ಸುವ ಮಾಲಿಕರ ಮೇಲೆ ಕಾರ್ಮಿಕ ಕಾಯ್ದೆ ಅಡಿಯಲ್ಲಿ ಕಾರ್ಮಿಕ ಇಲಾಖೆಯ ನಿರೀಕ್ಷಕರು ಅಗತ್ಯ ಕ್ರಮ ಕೈಗೊಳ್ಳುತ್ತಾರೆ ಎಂದು ತಿಳಿಸಿದರು. ತಾಲೂಕು ಪಂಚಾಯಿತಿ ಇ.ಓ. ಖಾಲಿದ್ ಆಹ್ಮದ್.ಪಿ.ಐ.ಸೋಮಶೇಖರ ಎಸ್.ಕೆಂಚರೆಡ್ಡಿ, ತಾಲೂಕು ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷರಾದ ವಿಶ್ವನಾಥ ರಾಯಪ್ಪ, ಪ್ರ. ಕಾರ್ಯದರ್ಶಿ ಯಲ್ಲಪ್ಪ ಹಿರೇಬಾದರದಿನ್ನಿ, ಹಿರಿಯ ವಕೀಲರಾದ ಶ್ರೀದೇವಿ ಬಳಿಗಾರ.ಅಮೃತ ವಕೀಲರು ಹಾಗೂ ಕಾರ್ಮಿಕ ಮುಖಂಡರಾದ ಪರಶುರಾಮ ಬಾಗಲವಾಡ, ಎಂ.ಡಿ.ಜಾಫರ್, ಮುದಗಲ್ ಭಾಷಾ ಸಿರವಾರ ಆಂಜನೇಯ್ಯ ಕೋಟೆ,ವೆಂಕಣ್ಣ ಸೇ–ರಿದಂತೆ ನೂರಾರು ಕಾರ್ಮಿಕರು ಭಾಗವಹಿಸಿದರು. ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ನಡೆದ ಅಂತರಾಷ್ಟ್ರೀಯ ಕಾರ್ಮಿಕ ದಿನದ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಸಿವಿಲ್ ನ್ಯಾಯಧೀಶರಾದ ಆನಂದ ಹೆಚ್.ಕೊಣ್ಣೂರು ಮಾತನಾಡಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ


### CMA

CMA ಎಂದರೆ Cost and Management Accountant. ಈ ಕೋರ್ಸ್ ಅನ್ನು The Institute of Cost Accountants of India (ICMAI) ನಡೆಸುತ್ತದೆ. ಇದು ಭಾರತದಲ್ಲಿ ಪ್ರಸಿದ್ಧವಾದ ಪ್ರೊಫೆಷನಲ್ ಅಕೌಂಟಿಂಗ್ ಕೋರ್ಸ್ ಆಗಿದೆ. CMA ಕೋರ್ಸ್‌ನಲ್ಲಿ ಮುಖ್ಯವಾಗಿ ಕೆಳಗಿನ ವಿಷಯಗಳನ್ನು ಕಲಿಸಲಾಗುತ್ತದೆ: Cost Accounting (ಖರ್ಚು ಲೆಕ್ಕಪತ್ರ) Financial Management (ಹಣಕಾಸು ನಿರ್ವಹಣೆ) Taxation (ತೆರಿಗೆ) Business Strategy & Management ಇದು ಕಂಪನಿಗಳಲ್ಲಿ ಹಣಕಾಸು ನಿರ್ಧಾರ ತೆಗೆದುಕೊಳ್ಳುವಲ್ಲಿ ಸಹಾಯ ಮಾಡುವ ಕೋರ್ಸ್. ಕೋರ್ಸ್ ರಚನೆ (Levels) ಅಂಂ ಕೋರ್ಸ್ ಮೂರು ಹಂತಗಳಾಗಿ ವಿಭಜಿಸಲಾಗಿದೆ: Foundation (ಅಡಿಪಾಯ) ಅರ್ಹತೆ: 12ನೇ ತರಗತಿ (PUC) ವಿಷಯಗಳು: Business Laws Accounting Economics Mathematics Intermediate (ಮಧ್ಯಮ) ಅರ್ಹತೆ: Foundation ಪಾಸ್ ಅಥವಾ Graduation ವಿಷಯಗಳು: Financial Accounting Cost Accounting Taxation Managemenl Final (ಅಂತಿಮ) Advanced ಮಟ್ಟದ ವಿಷಯಗಳು: Strategic Management Corporate Laws Financial Reporting ಒಟ್ಟು ಸುಮಾರು 20 papers ಇರುತ್ತವೆ. ಕೋರ್ಸ್ ಅವಧಿ (Duration) ಸಾಮಾನ್ಯವಾಗಿ: 3 ವರ್ಷಗಳು ಆದರೆ ನಿಮ್ಮ ಓದುವ ವೇಗದ ಮೇಲೆ ಅವಲಂಬಿತವಾಗಿದೆ

## ಬಂಗಾಳದ ಮಹಿಳೆಯರ ಸುರಕ್ಷತೆಗೆ ಹೋರಾಡುವೆ :ರತ್ನಾ ದೇಬ್ನಾಥ್

ನೈಜ್ಯ ದೆಸೆ ನ್ಯೂಸ್

**ಕೋಲ್ಕತ್ತಾ: ಇದು ಮತಗಳ ಚುನಾವಣೆಯಲ್ಲ, ಬಂಗಾಳದ ಸ್ತ್ರೀಯರ ಸುರಕ್ಷತೆಗಾಗಿ ಹೋರಾಟ ಎಂದು ಪಾಣಿಹಟಿ ಕ್ಷೇತ್ರದಲ್ಲಿ ಗೆಲುವು ಸಾಧಿಸಿದ ಬಿಜೆಪಿ ಅಭ್ಯರ್ಥಿ, ಆರ್‌ಜಿ ಕರ್ ಅತ್ಯಾಚಾರ ಸಂತ್ರಸ್ತೆಯ ತಾಯಿ ರತ್ನಾ ದೇಬ್ನಾಥ್ ಹೇಳಿದ್ದಾರೆ. ಮಾಧ್ಯಮದೊಂದಿಗೆ ಮಾತನಾಡಿದ ಅವರು,**



**ಇದು ಕೇವಲ ಮತಗಳಿಂದ ಗೆದ್ದು ಬೀಗುವ ಚುನಾವಣೆಯಲ್ಲ.**

ಇದು ನನ್ನ ಮಗಳ ನ್ಯಾಯಕ್ಕಾಗಿ ಹೋರಾಟ, ಬಂಗಾಳದಲ್ಲಿ ಮಹಿಳೆಯರ ಸುರಕ್ಷತೆಗಾಗಿ ಹೋರಾಟ ಮಾಡುವ ಚುನಾವಣೆ. ಪಾಣಿಹಟಿದ ಜನರು ನನ್ನೊಂದಿಗಿದ್ದಾರೆ. ಈ ಮತಗಳು ನನ್ನ ಮಗಳಿಗಾಗಿ, ನ್ಯಾಯಕ್ಕಾಗಿ ಪರಿತಪಿಸುತ್ತಿರುವ ಜನರ ಒಳಿತಿಗಾಗಿ ಹಾಗೂ ಸುದೀರ್ಘ ಕಾಲದಿಂದ ಈ ಸರ್ಕಾರದ ಅಡಿಯಲ್ಲಿ ಸಿಲುಕಿ ಬಳಲುತ್ತಿರುವ ಮಹಿಳೆಯರಿಗಾಗಿ ಎಂದಿದ್ದಾರೆ. ಪಾಣಿಹಟಿಯಲ್ಲಿನ ಈ ಯಶಸ್ಸು ವೈಯಕ್ತಿಕ ಗೆಲುವಲ್ಲ, ಬದಲಾಗಿ ಪಶ್ಚಿಮ ಬಂಗಾಳದಲ್ಲಿ ಬದಲಾಗುತ್ತಿರುವ ರಾಜಕೀಯ ಅಲೆ ಹಾಗೂ ಬಂಗಾಳದ ಜನರ ಸಾಮೂಹಿಕ ಹೋರಾಟವಾಗಿದೆ. ಐತಿಹಾಸಿಕವಾಗಿ ಮತದಾನದ ಪ್ರಮಾಣ ಹೆಚ್ಚಾಗಿದೆ. ಎರಡನೇ ಹಂತದ ಚುನಾವಣೆಯಲ್ಲಿ ಶೇ.91.66ರಷ್ಟು ಮತದಾನವಾಗಿದೆ. ಈ ಫಲಿತಾಂಶದಿಂದ ಪಾಣಿಹಟಿಯಲ್ಲಿ ಮತದಾರರ ಆದ್ಯತೆಯಲ್ಲಿ ಬದಲಾವಣೆಯಾಗಿರುವುದು ಎದ್ದು ಕಾಣುತ್ತಿದೆ. ಬಂಗಾಳದ ಜನರು ಟಿಎಂಸಿಯಿಂದ ಬೇಸತ್ತಿದ್ದಾರೆ ಎಂದು ತಿಳಿಸಿದ್ದಾರೆ. ಪ್ರಚಾರದ ಸಮಯದಲ್ಲಿ ಪ್ರತಿಸ್ಪರ್ಧಿ ಪಕ್ಷದ ಕಾರ್ಯಕರ್ತರಿಂದ ಕಿರುಕುಳ ಮತ್ತು ಬೆದರಿಕೆಯನ್ನು ಎದುರಿಸುತ್ತಿದ್ದರೂ ಕೂಡ ರತ್ನಾ ದೇಬ್ನಾಥ್ ಅವರು ಕುಗ್ಗದೇ ಮುಂದೆ ಸಾಗಿದರು. 13 ಸುತ್ತುಗಳ ಇವಿಎಂ ಎಣಿಕೆಯ ನಂತರದ ಅಂತಿಮ ಫಲಿತಾಂಶಗಳ ಪ್ರಕಾರ, ರತ್ನಾ ದೇಬ್ನಾಥ್ ಅವರು ಒಟ್ಟು 87,977 ಮತಗಳನ್ನು ಗಳಿಸಿದ್ದು, ತೃಣಮೂಲ ಕಾಂಗ್ರೆಸ್‌ನ ತೀರ್ಥಂಕರ ಘೋಷ್ 59,141 ಮತಗಳನ್ನು ಪಡೆದುಕೊಂಡಿದ್ದಾರೆ. ಈ ಮೂಲಕ ಬರೋಬ್ಬರಿ 28,836 ಮತಗಳ ಅಂತರದಿಂದ ಭರ್ಜರಿ ಗೆಲುವು ಸಾಧಿಸಿದ್ದಾರೆ.

# ಆಪರೇಷನ್ ಚಿತ್ರದುರ್ಗ,ಮಿಷನ್ ಅಭಿಮಾನೋತ್ಸವ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಮೇ 9ರಂದು ಕೋಟೆನಾಡು ಚಿತ್ರದುರ್ಗದಲ್ಲಿ ನಡೆಯಲಿರುವ ಬಿ.ಎಸ್. ಯಡಿಯೂರಪ್ಪ ರವರ ಅಭಿಮಾನೋತ್ಸವದ ಯಶಸ್ವಿ ಆಯೋಜನೆಗೆ ಸಂಬಂಧಿಸಿದಂತೆ ಮಸ್ಕಿಯ ಪಕ್ಷದ ಕಾರ್ಯಾಲಯದ ಮುಂಭಾಗದಲ್ಲಿ ಇಂದು ಪೂರ್ವಭಾವಿ ಸಭೆ ಜರುಗಿತು. ಸಭೆಯಲ್ಲಿ ಸಮಾರಂಭದ ರೂಪರೇಷೆ, ನಿರ್ವಹಣೆ ಹಾಗೂ ಸಂಘಟನೆ ಬಲವರ್ಧನೆ ಕುರಿತು ಸವಿಸ್ತಾರ ಚರ್ಚೆ ನಡೆಯಿತು.**



ಈ ಸಂದರ್ಭದಲ್ಲಿ ವಿವಿಧ ಮೋರ್ಚಾ ಪದಾಧಿಕಾರಿಗಳು ಹಾಗೂ ಮಹಾಶಕ್ತಿ ಕೇಂದ್ರಗಳ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳ ಪದಗ್ರಹಣ ಸಮಾರಂಭವೂ ನೆರವೇರಿತು. ಮಸ್ಕಿ ಮಂಡಲ ಬಿಜೆಪಿ ಅಧ್ಯಕ್ಷರಾದ ಶರಣಬಸವ ಸೊಪ್ಪಿಮಠ ಅವರು ಮಹಾಶಕ್ತಿ ಕೇಂದ್ರಗಳ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳನ್ನು ನೇಮಿಸಿ ಆದೇಶಿಸಿದರು.ತೋರಣದಿನ್ನಿ ಮಹಾಶಕ್ತಿ ಕೇಂದ್ರದ ಅಧ್ಯಕ್ಷರಾಗಿ ಚನ್ನಬಸವ ಮಾಲಿಪಾಟೀಲ್ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಲಕ್ಷ್ಮಣ ಮಡಿವಾಳ, ಸಂತೆಕಲ್ಲೂರು ಕೇಂದ್ರದ ಅಧ್ಯಕ್ಷರಾಗಿ ದೇವಣ್ಣ ಕಾಟಗಲ್ ಮತ್ತು ಪ್ರಧಾನ ಕಾರ್ಯದರ್ಶಿಯಾಗಿ ರಮೇಶ್ ಬಂಡಾರಿ, ಮೆದಿಕಿನಾಳ ಕೇಂದ್ರದ ಅಧ್ಯಕ್ಷರಾಗಿ ಅಮರೇಶ ಗುಂಡಳ್ಳಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಮೌನೇಶ ಪವಾರ್ ನೇಮಕಗೊಂಡರು.

ಮಸ್ಕಿ ಕೇಂದ್ರದ ಅಧ್ಯಕ್ಷರಾಗಿ ಮಹಾಂತೇಶ ಪಾಟೀಲ್ ಮತ್ತು ಪ್ರಧಾನ ಕಾರ್ಯದರ್ಶಿಯಾಗಿ ಅಮರೇಶ ಸುಂಕದ್, ಬಳಗಾನೂರು ಕೇಂದ್ರದ ಅಧ್ಯಕ್ಷರಾಗಿ ಸಂತೋಷ ಅಂಬ್ಲಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಶಿವಮೂರ್ತಿ ಸ್ವಾಮಿ, ಗುಡದೂರು ಕೇಂದ್ರದ ಅಧ್ಯಕ್ಷರಾಗಿ ಅಮರೇಶ ಹಸ್ಮಕಲ್ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ರಾಘವೇಂದ್ರ ನಾಯಕ ನೇಮಕಗೊಂಡರು.ಇದೇ ವೇಳೆ ತಿಡಿಗೋಳ್, ಆದನಗೌಡ ಹತ್ತಿಗುಡ್ಡ, ತುರುವಿಹಾಳ ಸೇರಿದಂತೆ ಹಲವು ಕೇಂದ್ರಗಳಿಗೂ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳನ್ನು ನೇಮಕ ಮಾಡಲಾಯಿತು.

ಸಭೆಯನ್ನುದ್ದೇಶಿಸಿ ಮಾತನಾಡಿದ ಮಾಜಿ ಶಾಸಕ ಪ್ರತಾಪ್ ಗೌಡ ಪಾಟೀಲ್ ಅವರು, ಪದಾಧಿಕಾರಿಗಳು ಬೂತ್ ಮಟ್ಟದಿಂದ ಸಂಘಟನೆ ಬಲಪಡಿಸಿ, ಪಕ್ಷದ ಗೆಲುವಿಗೆ ಶ್ರಮಿಸಬೇಕು ಎಂದು ಕರೆ ನೀಡಿದರು. ಮಂಡಲ ಅಧ್ಯಕ್ಷ ಶರಣಬಸವ ಸೊಪ್ಪಿಮಠ ಅವರು ಮಾತನಾಡಿ, ಪ್ರತಿ ತಿಂಗಳು ಮಂಡಲ ಮತ್ತು ಶಕ್ತಿ ಕೇಂದ್ರ ಮಟ್ಟದಲ್ಲಿ ಸಭೆಗಳನ್ನು ನಡೆಸಿ, ಸಂಘಟನೆಗೆ ಚೈತನ್ಯ ತುಂಬಬೇಕು.ಕಾರ್ಯಕರ್ತರು ನಿರಂತರವಾಗಿ ತೊಡಗಿಸಿಕೊಂಡು ಪಕ್ಷದ ಬಲವರ್ಧನೆಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ರಾಜ್ಯ ಕಾರ್ಯಕಾರಿ ಸದಸ್ಯ ಬಸವಂತರಾಯ ಕುರಿ,ಜಿಲ್ಲಾ ಉಪಾಧ್ಯಕ್ಷ ಚಂದ್ರಕಾಂತ್ ಪಾಟೀಲ್, ಜಿಲ್ಲಾ ಕಾರ್ಯದರ್ಶಿ ಶಾರದ ರಾಥೋಡ್, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಬಸವರಾಜ್ ಗುಡಿಹಾಳ ಮತ್ತು ರಮೇಶ್ ಉದ್ಬಾಳ್ ಸೇರಿದಂತೆ ಹಲವು ಮುಖಂಡರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಭಾಗವಹಿಸಿದರು.

**ವರದಿ: ಸುರೇಶ್ ಬಳಗಾನೂರು**

# "ಬಿಸಿಲ ಬೇಗೆ: ಹಕ್ಕಿಗಳ ದಾಹ ತಣಿಸುತ್ತಿರುವ ಯಲ್ಲಪ್ಪ"



ನೈಜ್ಯ ದೆಸೆ ನ್ಯೂಸ್

**ಕವಿತಾಳ: ದಿನದಿಂದ ದಿನಕ್ಕೆ ಸೂರ್ಯನ ಪ್ರಖರತೆ ಹೆಚ್ಚುತ್ತಿದೆ. ಅರಣ್ಯ ಪ್ರದೇಶದಲ್ಲಿ ಪ್ರಾಣಿ, ಪಕ್ಷಿಗಳು ಗುಟುಕು ನೀರಿಗಾಗಿ ಪರದಾಡುವಂತಾಗಿದೆ.**

ಇಂತಹ ಸಂಕಷ್ಟದ ಸಮಯದಲ್ಲಿ ಮಸ್ಕಿ ತಾಲ್ಲೂಕಿನ ಮಲ್ಲದಗುಡ್ಡ ಗ್ರಾಮದ ಯಲ್ಲಪ್ಪ ಜವಳಗೇರಿ ಪಕ್ಷಿಗಳ ಪಾಲಿಗೆ ಸಂಜೀವಿನಿಯಾಗಿದ್ದಾರೆ.

ಗ್ರಾಮದ ತಿಮ್ಮಪ್ಪನ ಗುಡ್ಡದ ಕಲ್ಲಿನ ಪೊಟರೆಗಳಲ್ಲಿ ನಿತ್ಯ ನೀರು ತುಂಬುವ ಮೂಲಕ ಪಕ್ಷಿಗಳಿಗೆ ಕುಡಿಯಲು ನೀರಿನ ವ್ಯವಸ್ಥೆ ಕಲ್ಪಿಸುತ್ತಿರುವ ಯಲ್ಲಪ್ಪ ತಮ್ಮ ಕೆಲಸದ ಒತ್ತಡದ ನಡುವೆಯೂ ಎರಡು ವರ್ಷಗಳಿಂದ ಈ ವಿಶಿಷ್ಟ ಕಾಯಕವನ್ನು ಮಾಡುತ್ತಿದ್ದಾರೆ. ಅವರ ಪಕ್ಷಿ ಪ್ರೇಮ ಇದೀಗ ಸಾರ್ವಜನಿಕರ ಗಮನ ಸೆಳೆದಿದೆ. ಕೃಷಿ ಚಟುವಟಿಕೆ, ಟ್ರ್ಯಾಕ್ಟರ್ ಮತ್ತು ಕಾರು ಚಾಲಕರಾಗಿರುವ ಯಲ್ಲಪ್ಪ 3 ತಿಂಗಳಿಂದ ಪಕ್ಷಿಗಳಿಗೆ ನೀರುಣಿಸುವ ಕಾಯಕದಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ನಿತ್ಯ ಬೆಳಿಗ್ಗೆ ಎದ್ದ ತಕ್ಷಣ ಯಲ್ಲಪ್ಪನವರ ದೈನಂದಿನ ಕೆಲಸ ಆರಂಭವಾಗುವುದು ಪಕ್ಷಿಗಳಿಗೆ ನೀರುಣಿಸುವುದರಿಂದ, ಮನೆಯಿಂದ 3 ಕೊಡ ನೀರನ್ನು ಬೈಕ್ ಮೇಲೆ ಇಟ್ಟುಕೊಂಡು ತಿಮ್ಮಪ್ಪನ ಗುಡ್ಡಕ್ಕೆ ಹೊರಡುತ್ತಾರೆ. ಅರ್ಧ ಹಾದಿಯ ನಂತರ ಬೈಕ್ ನಿಲ್ಲಿಸಿ ಕೊಡಗಳನ್ನು ಹೆಗಲ ಮೇಲೆ ಹೊತ್ತು, ಕಡಿದಾದ ಗುಡ್ಡ ಹತ್ತಿ ಅಲ್ಲಿನ ನೈಸರ್ಗಿಕ ಪೊಟರೆಗಳನ್ನು ಸ್ವಚ್ಛಗೊಳಿಸಿ, ನೀರು ತುಂಬಿಸುತ್ತಾರೆ.

ಗುಬ್ಬಚ್ಚಿ, ಕಾಗೆ, ಪಾರಿವಾಳ, ಅಳಿಲು, ಗೊರವಂಕ ಬೆಳ್ಳಕ್ಕಿ ಸೇರಿದಂತೆ ಸಾಲು ಸಾಲಾಗಿ ಬರುವ ನವಿಲುಗಳು ನೀರು ಕುಡಿದು ಬಾಯಾರಿಕೆ ನೀಗಿಸುಕೊಳ್ಳುತ್ತವೆ. ಮನುಷ್ಯರ ಸುಳಿವು ಸಿಕ್ಕರೆ ಹಾರಿ ಹೋಗುವ ಈ ಪಕ್ಷಿಗಳು ಯಲ್ಲಪ್ಪ ತುಂಬುವ ನೀರಿಗಾಗಿ ಕಾದು ಕುಳಿತಿರುತ್ತವೆ. 'ಬೆಳಿಗ್ಗೆ ಕೆಲಸಕ್ಕೆ ಹೋದರೆ ಮನೆಗೆ ವಾಪಸಾಗುವಷ್ಟರಲ್ಲಿ ಸಂಜೆಯಾಗುತ್ತದೆ. ಹೀಗಾಗಿ ಬೆಳಿಗ್ಗೆಯೇ ಎರಡು ಕೊಡ ನೀರನ್ನು ಬೈಕ್ ಹಾಗೂ ಹೆಗಲ ಮೇಲೆ ಹೊತ್ತುಕೊಂಡು ಗುಡ್ಡ ಹತ್ತಿ ಕಲ್ಲಿನ ಪೊಟರೆಗಳಿಗೆ ಹಾಕುತ್ತೇನೆ.

ನಿತ್ಯ ನೂರಾರು ಪಕ್ಷಿಗಳು ಅಲ್ಲಿಗೆ ಬಂದು ನೀರು ಕುಡಿಯುತ್ತವೆ. ಹತ್ತಾರು ನವಿಲುಗಳು ಒಟ್ಟಿಗೆ ಬರುತ್ತವೆ. ನೀರು ಕುಡಿದು ನರ್ತಿಸುತ್ತವೆ. ಮನುಷ್ಯರು ಬರುವ ಸುಳಿವು ಸಿಕ್ಕರೆ ಜಿಗಿದು ಪರಾರಿಯಾಗುತ್ತವೆ. ಎರಡು ವರ್ಷಗಳಿಂದ ಬೇಸಿಗೆಯಲ್ಲಿ 4 ತಿಂಗಳು ನಿತ್ಯ ಪಕ್ಷಿಗಳಿಗೆ ನೀರು ಒದಗಿಸುತ್ತೇನೆ. ಮಕ್ಕಳು ನನ್ನೊಂದಿಗೆ ಬಂದು ಪಕ್ಷಿಗಳಿಗೆ ನೀರು ಹಾಕುತ್ತಾರೆ' ಎಂದು ಯಲ್ಲಪ್ಪ ತಿಳಿಸಿದರು.

# ರಾಯಚೂರು ನೂತನ ಜಿಲ್ಲಾಧಿಕಾರಿಯಾಗಿ ಪೂವಿತಾ ಎಸ್. ನೇಮಕ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ಹಣಕಾಸು ನಿಗಮ (ಕೆಯುಐಡಿಎಫ್‌ಸಿ) ವ್ಯವಸ್ಥಾಪಕ ನಿರ್ದೇಶಕಿ ಪೂವಿತಾ ಎಸ್. ಅವರನ್ನು ಹೊಸ ಜಿಲ್ಲಾಧಿಕಾರಿಯಾಗಿ ನೇಮಕ ಮಾಡಲಾಗಿದೆ. ಪೂವಿತಾ ಅವರು ಐಎಎಸ್ 2016ರ ತಂಡದವರು.**



ಹಣಕಾಸು ಇಲಾಖೆಯ (ಬಜೆಟ್ ಮತ್ತು ಸಂಪನ್ಮೂಲಗಳು) ಜಂಟಿ ಕಾರ್ಯದರ್ಶಿಯಾಗಿದ್ದ ನಿತಿಶ್ ಕೆ. ಅವರನ್ನು 2024ರ ಜುಲೈ 6ರಂದು ವರ್ಗಾವಣೆ ಮಾಡಿ ರಾಯಚೂರು ನೂತನ ಜಿಲ್ಲಾಧಿಕಾರಿಯನ್ನಾಗಿ ನೇಮಕ ಮಾಡಲಾಗಿತ್ತು. ನಿತೀಶ್ ಅವರು 2015ರ ತಂಡದ ಐಎಎಸ್ ಅಧಿಕಾರಿಯಾಗಿರುವ ನಿತಿಶ್ ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ಕೆಲವೇ ದಿನಗಳಲ್ಲಿ ನಗರ ಸುತ್ತಾಡಿ 'ಇಷ್ಟು ಹೊಲಸು ಊರು ನಾನು ಎಲ್ಲಿಯೂ ನೋಡಿರಲಿಲ್ಲ' ಎಂದು ಸಭೆಯಲ್ಲೇ ಬೇಸರ ವ್ಯಕ್ತಪಡಿಸಿದ್ದರು.

ನಂತರ ಮಹಾನಗರಪಾಲಿಕೆಯ ಮೂಲಕ ನಗರದಲ್ಲಿ ಸ್ವಚ್ಛತೆ ಕೈಗೊಳ್ಳಲು ಸಾಕಷ್ಟು ಪರಿಶ್ರಮ ವಹಿಸಿದರು. ಸೇನೆಯಲ್ಲಿ ರಾಯಚೂರು ಜಿಲ್ಲೆಯ ಯುವಕರಿಗೆ ಅವಕಾಶ ಮಾಡಿಕೊಡಲು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಸೇನಾ ಭರ್ತಿ ರ‍್ಯಾಲಿಗೆ ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿಸಿದ್ದರು. ಜಿಲ್ಲಾಡಳಿತ ಕಚೇರಿ ಇದ್ದರೂ ಹೊಸ ಕಟ್ಟಡಕ್ಕೆ ಸ್ಥಳಾಂತರಿಸಲು ಹಿಂದಿನ ಜಿಲ್ಲಾಧಿಕಾರಿಗಳು ಆಸಕ್ತಿ ತೋರಿಸಿರಲಿಲ್ಲ. ಆದರೆ, ನಿತಿಶ್ ದಿಟ್ಟ ಕ್ರಮ ಕೈಗೊಂಡು ಹೊಸ ಕಟ್ಟಡಕ್ಕೆ ಜಿಲ್ಲಾಧಿಕಾರಿ ಕಚೇರಿ ಸ್ಥಳಾಂತರಿಸಿದರು. ಬಾಡಿಗೆ ಕಟ್ಟಡದಲ್ಲಿದ್ದ ಅನೇಕ ಸರ್ಕಾರಿ ಕಚೇರಿಗಳಿಗೆ ಹೊಸ ಕಟ್ಟಡದಲ್ಲಿ ಜಾಗ ಒದಗಿಸಿದರು.

ಜಿಲ್ಲೆಯಲ್ಲಿ ಪ್ರಮುಖ ಪ್ರವಾಸಿ ತಾಣಗಳನ್ನು ಗುರುತಿಸಿ ಅವುಗಳ ಅಭಿವೃದ್ಧಿಗೆ ಸರ್ಕಾರಕ್ಕೆ ಪ್ರಸ್ತಾವ ಕಳಿಸಿದರು. ರಾಯಚೂರು ಕೋಟೆ ಅಭಿವೃದ್ಧಿ ಹಾಗೂ ವೃತ್ತಗಳ ಅಭಿವೃದ್ಧಿಗೆ ನೀಲನಕ್ಷೆ ಪಡಿಸಿ ಕಾರ್ಯಪ್ರವೃತ್ತರಾಗಿದ್ದರು. ವ್ಯಕ್ತಿಯೊಬ್ಬರು ನ್ಯಾಯಾಲಯದ ಮೊರೆ ಹೋಗಿರುವ ಕಾರಣ ವೃತ್ತದ ಅಭಿವೃದ್ಧಿ ಅರ್ಧಕ್ಕೆ ನಿಂತಿದೆ. ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು ಹಾಗೂ ಮಾಧ್ಯಮ ಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ರಾಯಚೂರು ಜಿಲ್ಲಾ ಉತ್ಸವ ಮಾಡಿದ್ದು, ಒಂದು ಐತಿಹಾಸಿಕ ಸಾಧನೆಯಾಗಿದೆ.

# ಗಣತಿದಾರರು ಬಿಸಿಗಾಳಿಯ ಕುರಿತು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲು ರಾಜ್ಯ ಜನಗಣತಿ ನೋಡಲ್ ಅಧಿಕಾರಿ ಮನೋಜ್ ಕುಮಾರ್ ಮೀನಾ ಸಲಹೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಭಾರತೀಯ ಹವಾಮಾನ ಇಲಾಖೆ ಬಿಡುಗಡೆ ಮಾಡಿದ 2026ರ ಬೇಸಿಗೆ ಕಾಲದ (ಏಪ್ರಿಲ್-ಜೂನ್ 2026) ಪರಿಷ್ಕೃತ ಋತು ಮುನ್ನೋಟದ ಪ್ರಕಾರ 2026ರ ಏಪ್ರಿಲ್-ಮೇ ತಿಂಗಳಲ್ಲಿ ಕರ್ನಾಟಕದ ಉತ್ತರ ಒಳನಾಡಿನ ಬಹುಭಾಗಗಳಲ್ಲಿ ಮತ್ತು ರಾಜ್ಯದ ಇತರ ಒಳನಾಡು ಪ್ರದೇಶಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚು ತಾಪಮಾನ ಮುಂದುವರಿಯುವ ಸಾಧ್ಯತೆಯಿದ್ದು,**

ಜನಗಣತಿ ಕಾರ್ಯಗಳಲ್ಲಿ ತೊಡಗಿರುವ ಗಣತಿದಾರರು ಬಿಸಿಗಾಳಿಯ ಕುರಿತು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕೆಂದು ಪರಿಹಾರ ಆಯುಕ್ತರು ಮತ್ತು ಕಂದಾಯ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ರಾಜ್ಯ ಜನಗಣತಿ ನೋಡಲ್ ಅಧಿಕಾರಿಗಳಾದ ಮನೋಜ್ ಕುಮಾರ್ ಮೀನಾ ಅವರು ಸಲಹೆ ನೀಡಿದ್ದಾರೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು 23ನೇ ಏಪ್ರಿಲ್ 2026ರ ಪತ್ರದ ಮೂಲಕ ಎಲ್ಲಾ ರಾಜ್ಯಗಳಿಗೆ ಬಿಸಿಗಾಳಿಯ ದುಷ್ಪರಿಣಾಮಗಳನ್ನು ಕಡಿಮೆಗೊಳಿಸಲು ಸೂಕ್ತ ಸಿದ್ಧತೆ ಮತ್ತು ಜಾಗೃತಿ ಕ್ರಮಗಳನ್ನು ಕೈಗೊಳ್ಳುವಂತೆ ಸಲಹೆ ನೀಡಿದೆ. ಇದರೊಂದಿಗೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು 28ನೇ ಏಪ್ರಿಲ್ 2026ರ ತನ್ನ ಪತ್ರದ ಮೂಲಕ ಬಿಸಿಗಾಳಿ ಸಿದ್ಧತೆ ಮತ್ತು ಪ್ರತಿಕ್ರಿಯೆಯನ್ನು ಬಲಪಡಿಸಲು ಮಾರ್ಗಸೂಚಿಗಳನ್ನು ಹೊರಡಿಸಿದೆ.

ಪ್ರಸ್ತುತ ಜನಗಣತಿಯ ಮೊದಲ ಹಂತವಾಗಿ ಮನೆಪಟ್ಟಿ ಮತ್ತು ಮನೆ ಗಣತಿಯನ್ನು ರಾಜ್ಯದಾದ್ಯಂತ ಕ್ಷೇತ್ರ ಗಣಕರ ಮೂಲಕ ನಡೆಯುತ್ತಿದೆ. ಈ ಕಾರ್ಯಗಳು ಬೇಸಿಗೆಯ ತೀವ್ರ ಬಿಸಿಗಾಳಿ ಅವಧಿಯಲ್ಲಿ ನಡೆಯುತಿದ್ದು, ದೀರ್ಘಕಾಲ ಹೊರಾಂಗಣದಲ್ಲಿ ಕೆಲಸ ಮಾಡುವುದರಿಂದ ಮತ್ತು ಶಾರೀರಿಕ ಶ್ರಮದಿಂದ ಉಷ್ಣ ಸಂಬಂಧಿತ ಅನಾರೋಗ್ಯದ ಅಪಾಯ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಗಣತಿದಾರರ ಆರೋಗ್ಯ ಕಾಪಾಡಿಕೊಳ್ಳುತ್ತಾ ಜನಗಣತಿ ಕಾರ್ಯವನ್ನು ಸುಗಮವಾಗಿ ನಡೆಸಲು ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸುವುದು ಅಗತ್ಯವಾಗಿದೆ.

ಆದ್ದರಿಂದ ಉಷ್ಣ ಸಂಬಂಧಿತ ಅಪಾಯಗಳನ್ನು ತಗ್ಗಿಸಲು ಮತ್ತು ಗಣತಿ ಕಾರ್ಯವನ್ನು ಸುಗಮವಾಗಿ ನಡೆಸಲು ಕೆಳಗಿನ ಮುನ್ನೆಚ್ಚರಿಕಾ ಕ್ರಮಗಳನ್ನು ಎಲ್ಲಾ ಗಣತಿದಾರರು ಕಟ್ಟುನಿಟ್ಟಾಗಿ ಪಾಲಿಸಬೇಕು. ಅತಿಯಾದ ಶ್ರಮ ತಪ್ಪಿಸಿ: ದಿನದ ತಂಪಾದ ಸಮಯಗಳಲ್ಲಿ (ಬೆಳಿಗ್ಗೆ ಬೇಗ ಮತ್ತು ಸಂಜೆ) ಕ್ಷೇತ್ರ ಭೇಟಿಗಳನ್ನು ಯೋಜಿಸಬೇಕು. ವಿಶೇಷವಾಗಿ ಮಧ್ಯಾಹ್ನ 12ರಿಂದ 3:30ರವರೆಗೆ ನೇರ ಸೂರ್ಯಕಿರಣಕ್ಕೆ ದೀರ್ಘಕಾಲ ಒಳಗಾಗುವುದನ್ನು ತಪ್ಪಿಸಬೇಕು. ನೆರಳು ಅಥವಾ ತಂಪಾದ ಸ್ಥಳಗಳಲ್ಲಿ ಕಾಲಕಾಲಕ್ಕೆ ವಿಶ್ರಾಂತಿ ತೆಗೆದುಕೊಳ್ಳಬೇಕು. ದೇಹದ ನೀರಿನ ಪ್ರಮಾಣ ಕಾಪಾಡಿಕೊಳ್ಳಿ: ಯಾವಾಗಲೂ ಸಮರ್ಪಕವಾಗಿ ನೀರಿನ ಸೇವನೆ ಮಾಡಬೇಕು. ದಾಹವಾಗದಿದ್ದರೂ ಪ್ರತಿ 20–30 ನಿಮಿಷಕ್ಕೊಮ್ಮೆ ನೀರು ಕುಡಿಯಬೇಕು. ಕ್ಷೇತ್ರ ಭೇಟಿಗಳ ಸಮಯದಲ್ಲಿ ಕುಡಿಯುವ ನೀರನ್ನು ಕೊಂಡೊಯ್ಯಬೇಕು. ಸಾಧ್ಯವಾದಲ್ಲಿ ಮಜ್ಜಿಗೆ, ನಿಂಬೆ ಷರಬತ್ತು.

ಎಳ ನೀರು, ಮೌಖಿಕ ಪುನರ್ಜಲೀಕರಣ ದ್ರಾವಣ ಅಥವಾ ಇತರೆ ಎಲೆಕ್ಟ್ರೋಲೈಟ್ ಪಾನೀಯಗಳನ್ನು ಸೇವಿಸಬೇಕು. ದೇಹದ ನೀರಿನ ಕೊರತೆಯನ್ನು ಹೆಚ್ಚಿಸುವ ಕ್ಯಾಫೀನ್ ಮತ್ತು ಸಕ್ಕರೆ ಪಾನೀಯಗಳನ್ನು ತಪ್ಪಿಸಬೇಕು. ರಕ್ಷಣಾತ್ಮಕ ಕ್ರಮಗಳು: ಸಡಿಲ ಮತ್ತು ಲಘು ಬಣ್ಣದ ಉಡುಪುಗಳನ್ನು ಧರಿಸಬೇಕು. ಟೋಪಿ, ಛತ್ರಿ ಮುಂತಾದ ರಕ್ಷಣಾತ್ಮಕ ಉಪಕರಣಗಳನ್ನು ಬಳಸಿಕೊಂಡು ನೇರ ಸೂರ್ಯಕಿರಣದಿಂದ ರಕ್ಷಿಸಿಕೊಳ್ಳಬೇಕು. ಸಾಧ್ಯವಾದಲ್ಲಿ ಸನ್‌ಸ್ಕ್ರೀನ್ ಬಳಸಿ ಬಿಸಿಲಿನ ಸುಡುವಿಕೆಯನ್ನು ತಪ್ಪಿಸಬೇಕು. ಆರೋಗ್ಯ ಮೇಲ್ವಿಚಾರಣೆ: ತಲೆಸುತ್ತು, ದಣಿವು, ತಲೆನೋವು, ವಾಂತಿ, ಅತಿಯಾದ ಬೆವರು ಅಥವಾ ಗೊಂದಲ ಮುಂತಾದ ಉಷ್ಣ ಸಂಬಂಧಿತ ಲಕ್ಷಣಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಇಂತಹ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣ ನೆರಳು ಅಥವಾ ತಂಪಾದ ಸ್ಥಳಕ್ಕೆ ಹೋಗಿ, ಸಮರ್ಪಕವಾಗಿ ನೀರು ಸೇವಿಸಿ ಮತ್ತು ತಕ್ಷಣ ವೈದ್ಯಕೀಯ ಸಹಾಯ ಪಡೆಯಬೇಕು.

ಮೊದಲಿನಿಂದ ಆರೋಗ್ಯ ಸಮಸ್ಯೆ ಇರುವವರು ಹೆಚ್ಚುವರಿ ಮುನ್ನೆಚ್ಚರಿಕೆ ವಹಿಸಬೇಕು. ಕ್ಷೇತ್ರ ಕರ್ತವ್ಯದ ವೇಳೆ ಸಮೀಪದ ಆರೋಗ್ಯ ಕೇಂದ್ರಗಳ ವಿವರಗಳು ಮತ್ತು ತುರ್ತು ಸಂಪರ್ಕ ದೂರವಾಣಿ ಸಂಖ್ಯೆಗಳನ್ನು ಸದಾ ಕೈಗೆಟುಕುವಂತೆ ಇಡಬೇಕು. ಎಲ್ಲಾ ಗಣಕರು ಈ ಸಲಹೆಗಳನ್ನು ಪಾಲಿಸಬೇಕು. ಮೇಲ್ವಿಚಾರಕ ಅಧಿಕಾರಿಗಳು ಈ ಸಲಹೆಗಳನ್ನು ಸರಿಯಾಗಿ ಪ್ರಸಾರ ಮಾಡುವುದನ್ನು ಮತ್ತು ಸಂಪೂರ್ಣವಾಗಿ ಅನುಸರಿಸುವುದನ್ನು ಖಚಿತಪಡಿಸಬೇಕೆಂದು ಪರಿಹಾರ ಆಯುಕ್ತರು ಮತ್ತು ಕಂದಾಯ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ರಾಜ್ಯ ಜನಗಣತಿ ನೋಡಲ್ ಅಧಿಕಾರಿಗಳಾದ ಮನೋಜ್ ಕುಮಾರ್ ಮೀನಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.